ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 306 ₹4, FRIDAY, 02 FEBRUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26

ಪ್ರಮುಖ ಮುಖ್ಯಾಂಶಗಳು

ಕೃಷಿ, ರೈತ ಕಲ್ಯಾಣ ಸಚಿವಾಲಯಕ್ಕೆ 1.27 ಲಕ್ಷ ಕೋಟಿ ರೂ. ಅನುದಾನ

ನವದೆಹಲಿ: ಕೇಂದ್ರ ಬಜೆಟ್-2024 ರಲ್ಲಿ ರಕ್ಷಣಾ ಕ್ಷೇತ್ರಕ್ಕೆ ಅತಿ ಹೆಚ್ಚು ಅನುದಾನ ಘೋಷಣೆಯಾಗಿದ್ದರೆ, ಅತಿ ಕಡಿಮೆ ಅನುದಾನವನ್ನು ಕೃಷಿ ಕ್ಷೇತ್ರಕ್ಕೆ ನೀಡಲಾಗಿದೆ. ಈ ಬಾರಿಯ ಬಜೆಟ್ ನಲ್ಲಿ ಪಿಎಂ ಕಿಸಾನ್ ಯೋಜನೆಯ ಮೊತ್ತವನ್ನು ವರ್ಷಕ್ಕೆ 6000 ದಿಂದ 7,500-8000 ರೂಪಾಯಿಗಳಿಗೆ ಏರಿಕೆ ಮಾಡಲಾಗುತ್ತದೆ ಎಂಬ ನಿರೀಕ್ಷೆ ಇತ್ತಾದರೂ ಇದರಲ್ಲಿ ಯಾವುದೇ ಬದಲಾವಣೆ ಮಾಡಲಾಗಿಲ್ಲ. ಪಿಎಂ ಕಿಸಾನ್ ಯೋಜನೆಯಡಿಯಲ್ಲಿ 11.8 ಕೋಟಿ ರೈತರಿಗೆ ನೆರವು ಸಿಕ್ಕಿದೆ ಎಂದು ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

ಹಾಲು, ಡೈರಿ ಉತ್ಪಾದನೆ ಹೆಚ್ಚಿಸುವ ಯೋಜನೆ ಪ್ರಕಟ

ನವದೆಹಲಿ: ದೇಶದಲ್ಲಿ ಹಾಲು ಮತ್ತು ಡೈರಿ ಉತ್ಪಾದನೆಯನ್ನು ಹೆಚ್ಚಿಸುವ ಯೋಜನೆಯನ್ನು ಪ್ರಕಟಿಸಿದ್ದಾರೆ.

ಭಾರತ ವಿಶ್ವದಲ್ಲೇ ಅತಿ ಹೆಚ್ಚು ಹಾಲು ಉತ್ಪಾದಿಸುವ ರಾಷ್ಟ್ರವಾಗಿದೆ. ಆದರೆ ಕಡಿಮೆ ಉತ್ಪಾದಕತೆ ಹೊಂದಿದೆ. ಹೀಗಾಗಿ ಡೈರಿಗಳ ಸಂಖ್ಯೆಯನ್ನು ಹೆಚ್ಚಿಸಲು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಹಣಕಾಸು ಸಚಿವೆ ಹೇಳಿದ್ದಾರೆ. 2022-23ರಲ್ಲಿ ಭಾರತದ ಹಾಲಿನ ಉತ್ಪಾದನೆಯು 230.58 ಮಿಲಿಯನ್ ಟನ್‌ಗಳಿಗೆ ಅಂದರೆ ಶೇ. 4 ರಷ್ಟು ಏರಿಕೆಯಾಗಿದೆ.

ಎಣ್ಣೆಕಾಳುಗಳ ಉತ್ಪಾದನೆಗೆ ಆತ್ಮ ನಿರ್ಭರತ್ ಕಾರ್ಯತಂತ್ರವನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ರಕ್ಷಣಾ ವಲಯಕ್ಕೆ 11 ಲಕ್ಷ ಕೋಟಿ ರೂ. ಅನುದಾನ

ನವದೆಹಲಿ: ಪ್ರತಿ ಬಜೆಟ್ ಮಂಡನೆ ವೇಳೆಯೂ ರಕ್ಷಣಾ ವಲಯಕ್ಕೆ ಮೊದಲ ಆದ್ಯತೆ ನೀಡಲಾಗುತ್ತದೆ. ಅದರಂತೆ ಈ ಬಾರಿಯೂ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ರಕ್ಷಣಾ ವಲಯಕ್ಕೆ 11 ಲಕ್ಷ ಕೋಟಿ ರೂ ಮೀಸಲಿಟ್ಟಿದ್ದಾರೆ.ಸ್ವೈಕರ್ ಶಸ್ತ್ರ ಸಜ್ಜಿತ ಯುದ್ಧ ವಾಹನವನ್ನು ನಿರ್ಮಿಸಲು ಒಪ್ಪಿಕೊಂಡಿವೆ.

ದೇಶದಲ್ಲಿ 390 ಹೊಸ ವಿಶ್ವವಿದ್ಯಾಲಯಗಳ ಸ್ಥಾಪನೆ



ನವದೆಹಲಿ: ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಪ್ರಸಕ್ತ ಸಾಲಿನ ಬಜೆಟ್ ಮಂಡನೆ ಮಾಡಿದ್ದು, ಗುಣಮಟ್ಟದ ಬೋಧನೆ ಮತ್ತು ಸಮಗ್ರ ಮತ್ತು ಸುಸಂಘಟಿತ ವ್ಯಕ್ತಿಗಳನ್ನು ಪೋಷಿಸಲು ಸರ್ಕಾರ ಗಮನಹರಿಸುತ್ತಿದೆ ಎಂದು ಹೇಳಿದರು.

ಉನ್ನತ ಶಿಕ್ಷಣಕ್ಕೆ ಸರ್ಕಾರ ವಿಶೇಷ ಗಮನ ಹರಿಸಿದೆ. ಕಳೆದ 10 ವರ್ಷಗಳಲ್ಲಿ, ಒಟ್ಟು 390 ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲಾಗಿದೆ. 7 ಹೊಸ ಐಐಟಿಗಳು, 16 ಐಐಐಟಿಗಳು, 7 ಐಐಎಂಗಳು, 15 ಎಐಐಎಂಎಸ್, 3,000 ಹೊಸ ಐಟಿಐಗಳನ್ನೂ ಸ್ಥಾಪಿಸಲಾಗಿದೆ ಎಂದು ಹೇಳಿದರು.

ಆರ್ಥಿಕ ವರ್ಷ 2025ರಲ್ಲಿ ಹಣಕಾಸು ಕೊರತೆಯ ಗುರಿ ಶೇ. 5.1ಕ್ಕೆ ಇಳಿಕೆ

ನವದೆಹಲಿ: ಕೇಂದ್ರವು ಆರ್ಥಿಕ ವರ್ಷ 2025ರಲ್ಲಿ ಶೇಕಡಾ 5.1ರಷ್ಟು ವಿತ್ತೀಯ ಕೊರತೆಯ ಅಂದಾಜು ಹೊಂದಿದ್ದು, ಒಟ್ಟು ಸಾಲವನ್ನು 14.13 ಲಕ್ಷ ಕೋಟಿ ರೂಪಾಯಿ ತೆರಿಗೆ ಸಂಗ್ರಹದಲ್ಲಿ ಏರುಪೇರಾಗಲಿದೆ ಎಂಬ ಊಹೆಯ ಆಧಾರದ ಮೇಲೆ ವಿತ್ತೀಯ ಕೊರತೆ ಗುರಿಯನ್ನು ಕಡಿಮೆ ಮಾಡಲಾಗಿದೆ ಎಂದರು.

ಪ್ರಸಕ್ತ ವಿತ್ತೀಯ ಕೊರತೆಯು ಶೇಕಡಾ 5.8ರಲ್ಲಿ ಕೊನೆಗೊಳ್ಳುವ ನಿರೀಕ್ಷೆಯಿದೆ ಎಂದು ಸಚಿವರು ಹೇಳಿದರು, ಇದು ಬಜೆಟ್ ಅಂದಾಜು ಶೇಕಡಾ 5.9ನ್ನು ಮೀರಿದೆ. ಆರ್ಥಿಕ ವರ್ಷ 2026ರ ವೇಳೆಗೆ ಶೇಕಡಾ 4.5ಕ್ಕಿಂತ ಕಡಿಮೆ ವಿತ್ತೀಯ ಕೊರತೆಯನ್ನು ಗುರಿಯಾಗಿಟ್ಟುಕೊಂಡು ವಿತ್ತೀಯ ಬಲವರ್ಧನೆಗೆ ಸರ್ಕಾರದ ಬದ್ಧತೆಯನ್ನು ಸಚಿವೆ ಪುನರುಚ್ಚರಿಸಿದರು.

ಲಕ್ಷದ್ವೀಪಕ್ಕೆ ಹೆಚ್ಚುವರಿ ಮೂಲಸೌಕರ್ಯ

ನವದೆಹಲಿ: ಲಕ್ಷದ್ವೀಪ ಸೇರಿ ನಮ್ಮ ದ್ವೀಪಗಳಗಳಲ್ಲಿ ಪ್ರವಾಸೋದ್ಯಮ ಮೂಲಸೌಕರ್ಯ ಯೋಜನೆಗಳನ್ನು ಕೈಗೊಳ್ಳಲಾಗುವುದು ಎಂದು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

ಲಕ್ಷದ್ವೀಪ ದೇಶದ ಜನಪ್ರಿಯ ಪ್ರವಾಸಿ ತಾಣವಾಗಿ ಪರಿಣಮಿಸಿದೆ ಎಂದು ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ನಮ್ಮ ಆರ್ಥಿಕ ಬಲ ದೇಶವನ್ನು ಉದ್ಯಮ ಹಾಗೂ ಕಾನ್ಫರೆನ್ಸ್ ಪ್ರವಾಸೋದ್ಯಮಕ್ಕೆ ಆಕರ್ಷಣೀಯವನ್ನಾಗಿ ಮಾಡಿದೆ ಎಂದು ಬಜೆಟ್ ಭಾಷಣದಲ್ಲಿ ಉಲ್ಲೇಖಿಸಿದ್ದಾರೆ.

ಜ.04 ರಂದು ಪ್ರಧಾನಿ ಮೋದಿ ಲಕ್ಷದ್ವೀಪಕ್ಕೆ ತೆರಳಿದ್ದರು ಈ ಬೆನ್ನಲ್ಲೇ ಅಲ್ಲಿ ಮೂಲಸೌಕರ್ಯ ಯೋಜನೆಗಳಿಗೆ ಬಜೆಟ್ ನಲ್ಲಿ ಹೆಚ್ಚಿನ ಆದ್ಯತೆ ನೀಡಲಾಗಿದೆ.

ಅರ್ಹ ಮಧ್ಯಮ ವರ್ಗದವರಿಗೆ ವಸತಿ ಯೋಜನೆ

ನವದೆಹಲಿ: ಸಮಾಜದಲ್ಲಿನ ಮಧ್ಯಮ ವರ್ಗದವರು ಸ್ವಂತ ಮನೆ ಹೊಂದಲು ಕೇಂದ್ರ ಸರ್ಕಾರವು ವಸತಿ ಯೋಜನೆಯನ್ನು ಪ್ರಾರಂಭಿಸಲಿದೆ ಎಂದು ಹಣಕಾಸು ಸಚಿವ ನಿರ್ಮಲಾ ಸೀತಾರಾಮನ್ ಗುರುವಾರ ಹೇಳಿದ್ದಾರೆ.

ಗ್ರಾಮೀಣ ವಸತಿ ಯೋಜನೆಯಡಿ ದೇಶದಲ್ಲಿ ಮೂರು ಕೋಟಿ ಮನೆಗಳ ಗುರಿಯನ್ನು ಸಾಧಿಸುವ ಸಮೀಪದಲ್ಲಿ ಇದ್ದೇವೆ. ಮುಂದಿನ ಐದು ವರ್ಷಗಳಲ್ಲಿ ಇನ್ನೂ ಎರಡು ಕೋಟಿ ಮನೆಗಳನ್ನು ನಿರ್ಮಿಸಲಾಗುವುದು ಎಂದು ಹೇಳಿದರು.

ತನ್ನ ಚುನಾವಣಾ ಪೂರ್ವ ಮಧ್ಯಂತರ ಬಜೆಟ್‌ನಲ್ಲಿ, ಸುಸ್ಥಿರ ಅಭಿವೃದ್ಧಿ ಮತ್ತು ಉತ್ಪಾದಕತೆಯನ್ನು ಸುಧಾರಿಸುವ ಆರ್ಥಿಕ ವಿಧಾನವನ್ನು ಸರ್ಕಾರವು ಅಳವಡಿಸಿಕೊಳ್ಳಲಿದೆ ಎಂದು ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

ಮಧ್ಯಂತರ ಬಜೆಟ್‌ನಲ್ಲಿ ನಾರಿಶಕ್ತಿಗೆ ಹೆಚ್ಚಿನ ಒತ್ತು

ನವದೆಹಲಿ: ವಿತ್ತ ಮಂತ್ರಿ ನಿರ್ಮಲಾ ಸೀತಾರಾಮನ್ ಅವರು ಮಂಡಿಸುತ್ತಿರುವ ಮಧ್ಯಂತರ ಬಜೆಟ್‌ನಲ್ಲಿ ನಾರಿ ಶಕ್ತಿಯ ಬಗ್ಗೆ ಪ್ರಸ್ತಾಪ ಮಾಡಿದ್ದಾರೆ.

ನಾರಿಶಕ್ತಿಗೆ ಹೆಚ್ಚಿನ ಒತ್ತು ನೀಡಲಾಗುವುದು ಎಂದ ಅವರು, ಕಳೆದ 10 ವರ್ಷಗಳಲ್ಲಿ ಉನ್ನತ ಶಿಕ್ಷಣದಲ್ಲಿ ಮಹಿಳೆಯರ ದಾಖಲಾತಿ 28% ಹೆಚ್ಚಾಗಿದೆ. ವಿಜ್ಞಾನ, ತಂತ್ರಜ್ಞಾನ, ಎಂಜಿನಿಯರಿಂಗ್ ಮತ್ತು ಗಣಿತ ಕೋರ್ಸ್‌ಗಳಲ್ಲಿ ಹುಡುಗಿಯರು ಮತ್ತು ಮಹಿಳೆಯರು 43% ದಾಖಲಾತಿಯನ್ನು ಮಾಡುತ್ತಾರೆ. ಇದು ವಿಶ್ವದಲ್ಲೇ ಅತಿ ಹೆಚ್ಚು ಎಂದು ತಿಳಿಸಿದ್ದಾರೆ. ತ್ರಿವಳಿ ತಲಾಖ್ ನಿಷೇಧ, ಸಂಸತ್ತು ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ 1/3 ಸ್ಥಾನಗಳನ್ನು ಮೀಸಲಿಡುವುದು. ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿಯಲ್ಲಿ 70% ರಷ್ಟು ಮನೆಗಳು ಮಹಿಳೆಯರ ಘನತೆಯನ್ನು ಹೆಚ್ಚಿಸಿವೆ ಎಂದರು.

ಕೇಂದ್ರ ಬಜೆಟ್ 2024

ನಿರ್ಮಲಾ ಸೀತಾರಾಮನ್ 6ನೇ ಬಜೆಟ್ 56 ನಿಮಿಷಗಳಲ್ಲೇ ಮಂಡನೆ

ನವದೆಹಲಿ: ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಗುರುವಾರ ತಮ್ಮ ಸತತ ಆರನೇ ಬಜೆಟ್ ಅನ್ನು 56 ನಿಮಿಷಗಳಲ್ಲೇ ಮಂಡಿಸಿದರು. ಇದು ಅವರ ಅತ್ಯಂತ ಕಡಿಮೆ ಅವಧಿಯ ಭಾಷಣವಾಗಿದೆ.

ಲೋಕಸಭೆ ಚುನಾವಣೆಯ ನಂತರ ಬಿಜೆಪಿ ನೇತೃತ್ವದ ಎನ್ ಡಿಎ ಸರ್ಕಾರ ಮತ್ತೆ ಅಧಿಕಾರಕ್ಕೆ ಮರಳುತ್ತದೆ ಎಂದು ಸಚಿವರು ಉಲ್ಲೇಖಿಸುತ್ತಿದ್ದಂತೆ ಕೆಲ ಸಂಸದರು ಕೂಗುವ ಮೂಲಕ ಅಸಮ್ಮತಿ ವ್ಯಕ್ತಪಡಿಸಿದರೆ, ವಿರೋಧ ಪಕ್ಷದ ಸದಸ್ಯರು ಸೀತಾರಾಮನ್ ಅವರ ಬಜೆಟ್ ಭಾಷಣವನ್ನು ಗಂಭೀರವಾಗಿ ಆಲಿಸಿದರು.

ಇದಕ್ಕೂ ಮುನ್ನ ಬಿಜೆಪಿ ಸದಸ್ಯರು ಭಾರತ್ ಮಾತಾ ಕಿ ಜೈ, ಜೈ ಶ್ರೀ ರಾಮ್, ಜೈ ಸಿಯಾರಾಮ್ ಘೋಷಣೆಗಳನ್ನು ಕೂಗಿದರು. ಪ್ರಧಾನಿ ನರೇಂದ್ರ ಮೋದಿ ಅವರು ಲೋಕಸಭೆಯ ಸಭಾಂಗಣಕ್ಕೆ 11 ಗಂಟೆಗೂ ಮುನ್ನ ಆಗಮಿಸಿ ತಮ್ಮ ಸ್ಥಾನದಲ್ಲಿ ಕುಳಿತುಕೊಂಡರು. 56 ನಿಮಿಷಗಳಲ್ಲಿ ಸೀತಾರಾಮನ್ ಅವರ ಬಜೆಟ್ ಭಾಷಣ ಮುಗಿಯಿತು. ಇದು ಅವರ ಅತೀ ಕಡಿಮೆಯ ಬಜೆಟ್ ಮಂಡನೆಯಾಗಿದೆ. ಅವರು 2020ರಲ್ಲಿ ಎರಡು ಗಂಟೆ ನಲವತ್ತು ನಿಮಿಷಗಳ ದೀರ್ಘಾವಧಿಯ ಬಜೆಟ್ ಭಾಷಣವನ್ನು ಮಾಡಿದ್ದರು. 2019ರಲ್ಲಿ ಸೀತಾರಾಮನ್ ಅವರ ಬಜೆಟ್ ಭಾಷಣವು ಎರಡು ಗಂಟೆ 17 ನಿಮಿಷಗಳ ಕಾಲ ನಡೆಯಿತು.

2021ರಲ್ಲಿ ಸೀತಾರಾಮನ್ ಅವರು ಒಂದು ಗಂಟೆ ಮತ್ತು 50 ನಿಮಿಷಗಳ ಕಾಲ ಬಜೆಟ್ ಮಂಡಿಸಿದರೆ ನಂತರ 2022ರಲ್ಲಿ 92 ನಿಮಿಷಗಳು ಮತ್ತು 2023ರಲ್ಲಿ 87 ನಿಮಿಷಗಳ ಕಾಲ ನಡೆಯಿತು. ಸೀತಾರಾಮನ್ ಅವರ ಬಜೆಟ್ ಭಾಷಣದಲ್ಲಿ ಹಿಂದಿನ ಸಂದರ್ಭಗಳಿಗಿಂತ ಭಿನ್ನವಾಗಿ ತಮಿಳು ಕವಿಗಳು ಮತ್ತು ಚಿಂತಕರ ಬಗ್ಗೆ ಯಾವುದೇ ಉಲ್ಲೇಖ ಕಂಡುಬಂದಿಲ್ಲ, ಆದರೆ ಅವರು ಕನಿಷ್ಠ ಎಂಟು ಬಾರಿ ಪ್ರಧಾನಿ ಮೋದಿ ಅವರನ್ನು ಉಲ್ಲೇಖಿಸಿದರು.

ಬಜೆಟ್ ಮಂಡನೆಗೂ ಮುನ್ನ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೀತಾರಾಮನ್ ಅವರಿಗೆ ಸಕ್ಕರೆ ಜೊತೆ ಒಂದು ಚಮಚ ಮೊಸರು ಕುಡಿಸಿ ಕೇಂದ್ರ ಬಜೆಟ್ ಮಂಡನೆಗೆ ಶುಭಾಶಯಗಳನ್ನು ತಿಳಿಸಿದರು. ಸೀತಾರಾಮನ್ ತಮ್ಮ ಬಜೆಟ್ ಭಾಷಣದಲ್ಲಿ ಎಫ್‌ಡಿಐ ಫಸ್ಟ್, ಡೆವಲಪ್ ಇಂಡಿಯಾ ಮತ್ತು ಜಿಡಿಪಿ ಆಡಳಿತ, ಅಭಿವೃದ್ಧಿ ಮತ್ತು ಕಾರ್ಯಕ್ಷಮತೆಗಾಗಿ ಹೊಸ ವಿಸ್ತರಣೆಯನ್ನು ರೂಪಿಸಿದರು. ಒಟ್ಟು ದೇಶೀಯ ಉತ್ಪನ್ನದ ವಿಷಯದಲ್ಲಿ ಹೆಚ್ಚಿನ ಬೆಳವಣಿಗೆಯನ್ನು ತಲುಪಿಸುವುದರ ಜೊತೆಗೆ, ಸರ್ಕಾರವು ಹೆಚ್ಚು ಸಮಗ್ರವಾದ 'ಜಿಡಿಪಿ', ಅಂದರೆ 'ಆಡಳಿತ, ಅಭಿವೃದ್ಧಿ ಮತ್ತು ಕಾರ್ಯಕ್ಷಮತೆ' ಮೇಲೆ ಸಮಾನವಾಗಿ ಗಮನಹರಿಸಿದೆ ಎಂದು ಸೀತಾರಾಮನ್ ಹೇಳಿದರು.

3 ಕೋಟಿ ಮಹಿಳಾ ಲಕ್ಷಾಧಿಪತಿಗಳ ಗುರಿ: ಮೋದಿ ಸರ್ಕಾರದ ಭರವಸೆ

ದೆಹಲಿ(ಬಜೆಟ್): ಪ್ರಧಾನಿ ನರೇಂದ್ರ ಮೋದಿ ಸರ್ಕಾರ 2024ರ ಕೇಂದ್ರ ಬಜೆಟ್‌ನಲ್ಲಿ ಮಹಿಳೆಯರ ಅಭಿವೃದ್ಧಿಗೆ ವಿಶೇಷ ಕೊಡುಗೆಗಳನ್ನು ನೀಡುವ ಭರವಸೆ ನೀಡಿದೆ. ದೇಶದ ಮಹಿಳೆಯರ ಆರ್ಥಿಕ ಶಕ್ತಿ, ಕೌಶಲ್ಯಾಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದ್ದು, 3 ಕೋಟಿ ಮಹಿಳಾ ಲಕ್ಷಾಧಿಪತಿಗಳನ್ನು ಸೃಷ್ಟಿಸುವ ಗುರಿ ಹೊಂದಲಾಗಿದೆ.

2024ರ ಬಜೆಟ್ ಮಂಡನೆಯಲ್ಲಿ ಮಹಿಳೆಯರ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡುವುದಾಗಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು. ದೇಶದಲ್ಲಿ ಈಗಾಗಲೇ ಒಂದು ಕೋಟಿ ಲಕ್‌ಪತಿ ದೀದಿಗಳು ಆಗಿದ್ದಾರೆ. ಇನ್ನೂ ಹೊಸದಾಗಿ 3 ಕೋಟಿ ಲಕ್‌ಪತಿ ದೀದಿಗಳನ್ನು ಸೃಷ್ಟಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದ್ದಾರೆ.

ಕೇಂದ್ರದ ಬಜೆಟ್ ಪ್ರಗತಿಯ ವಾಹಕ

ಕೇಂದ್ರದ ಬಜೆಟ್ ನಿಜವಾಗಿಯೂ ಆಶಾದಾಯಕವಾಗಿದೆ ಎಂದು ಕೆಎಲ್ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಯುಷ್ಮಾನ್ ಭಾರತ ಅಡಿಯಲ್ಲಿ ಎಲ್ಲ ಆಶಾಕಾರ್ಯಕರ್ತೆಯರಿಗೆ, ಅಂಗನವಾಡಿ ಕಾರ್ಯಕರ್ತೆಯರಿಗೆ ಮತ್ತು ಸಹಾಯಕರಿಗೆ ಆರೋಗ್ಯವಿಮೆಯನ್ನು ವಿಸ್ತರಿಸಿ ಇರುವುದು ಬಹುಮೌಲಿಕವೆನಿಸಿದೆ. ಅದರೊಂದಿಗೆ ಇಲೆಕ್ಟ್ರಿಕಲ್ ವಾಹನಗಳಿಗೆ ಉತ್ತೇಜನ ನೀಡಲಾಗಿದೆ, ಲಕ್ಷದ್ವೀಪ ಪ್ರವಾಸೋದ್ಯಮಕ್ಕೆ ಆದ್ಯತೆ ನೀಡಲಾಗಿದೆ. ರಕ್ಷಣಾ, ಗ್ರಾಮೀಣಾಭಿವೃದ್ಧಿ, ಕೃಷಿ, ಸಹಕಾರಿ ಕ್ಷೇತ್ರಗಳಿಗೆ ಹೆಚ್ಚಿನ ಅನುದಾನವನ್ನು ನೀಡಿರುವುದು ಭವಿಷ್ಯತ್ತಿನಲ್ಲಿ ಭಾರತ ಮತ್ತಷ್ಟು ಪ್ರಕಾಶಿಸಲಿದೆ. ಗರ್ಭಕಂಠ ಕ್ಯಾನ್ಸರ್ ತಡೆಗಟ್ಟಲು 9 ರಿಂದ 14 ವರ್ಷದ ಮಕ್ಕಳಿಗೆ ಲಸಿಕೆಯನ್ನು ನೀಡುತ್ತಿರುವುದು ಮಹತ್ವದ ನಿರ್ಧಾರವೆನಿಸಿದೆ. ಅದರೊಂದಿಗೆ ಒಂದು ಕೋಟಿ ಮನೆಗಳಿಗೆ ಉಚಿತ ವಿದ್ಯುತ್ ನೀಡುತ್ತಿರುವುದು ಅಭಿನಂದನೀಯ. 1 ಲಕ್ಷ ಕೋಟಿ ಸಂಶೋಧನೆಗೆ ಮೀಸಲಾಗಿಟ್ಟಿರುವುದು ಪ್ರಗತಿಯ ದಿಕ್ಸೂಚಿಯಾಗಿದೆ.

ಕೇಂದ್ರ ಬಜೆಟ್ ಗೆ ವಿನಾಶಕಾರಿ ಬಜೆಟ್

ಬೆಂಗಳೂರು: ಇದು ಬಹಳ ಹೊತ್ತು ಚರ್ಚೆ ಮಾಡುವ ಬಜೆಟ್ ಅಲ್ಲವೆಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಟ್ಟಾರೆ ಕೇಂದ್ರದ ಬಜೆಟ್ ನಿರಾಶದಾಯಕ ಬಜೆಟ್. ಇದು ಎಲೆಕ್ಷನ್ ಬಜೆಟ್ ಎಂದು ಕಿಡಿಕಾರಿದ್ದಾರೆ. 47 ಲಕ್ಷದ 65 ಸಾವಿರ 768 ಕೋಟಿ ರೂ. ಗಾತ್ರ ಬಜೆಟ್ ಆಗಿದೆ. ಕಳೆದ ವರ್ಷ 45 ಲಕ್ಷದ 3 ಸಾವಿರ 97 ಕೋಟಿ 2 ಲಕ್ಷದ 66 ಸಾವಿರ ಕೋಟಿ ರೂ. ಹೆಚ್ಚು ಈಗಿನ ಮಧ್ಯಂತರ ಬಜೆಟ್ ಘೋಷಣೆ ಆಗದಿರಬಹುದು. ಅಂದರೆ ಕಳೆದ ಬಾರಿಗಿಂತ ಈ ವರ್ಷ 5.8% ಹೆಚ್ಚಳವಾಗಿದೆ ಎಂದಿದ್ದಾರೆ.

16 ಲಕ್ಷದ 85 ಸಾವಿರದ 496 ಕೋಟಿ ರೂ. ಸಾಲ ಮಾಡಿದ್ದಾರೆ. 190 ಲಕ್ಷ ಕೋಟಿ ರೂ. ಸಾಲ ಕೇಂದ್ರದ ಮೇಲಿದೆ. ಈ ಬಜೆಟ್ನಲ್ಲಿ ಸಾಲಕ್ಕಾಗಿ ಬಡ್ಡಿ ಪಾವತಿ 11 ಲಕ್ಷದ 91 ಸಾವಿರ ಕೋಟಿ ರೂ. ಒಟ್ಟಾರೆಯಾಗಿ ಈ ಬಜೆಟ್ ನಿರಾಶಾದಾಯಕವಾಗಿದ್ದು, ಚುನಾವಣೆಗೋಸ್ಕರ ಮಾಡಿದ್ದಾರೆ. ಯಾವುದೇ ಹೊಸ ಅಂಶ ಇಲ್ಲ. ಬಜೆಟ್ ವಿಶ್ಲೇಷಣೆ ಮಾಡುವುದು ಕಷ್ಟ ಎಂದು ವಾಗ್ದಾಳಿ ಮಾಡಿದ್ದಾರೆ.

ಈ ಬಜೆಟ್ ಜನರ ಮುಂದೆ ಇಡುವುದಕ್ಕಿಂತ, ಮುಚ್ಚಿಟ್ಟಿರುವುದೇ ಜಾಸ್ತಿ. ನಿರುದ್ಯೋಗ, ಬೆಲೆ ಏರಿಕೆ, ರೈತರ ಸಮಸ್ಯೆ, ಬರಗಾಲದ ಬಗ್ಗೆ ಹೇಳಿಲ್ಲ. ಸಾಲ ಎಷ್ಟು ಮಾಡಿದ್ದೇವೆ, ವಿಕಸಿತ ಭಾರತ ಅಂತ ಎಲ್ಲ ಕಡೆ ಮೋದಿ ಸರ್ಕಾರದ ಸಾಧನೆ ಅಂತ ಪ್ರಚಾರ ಮಾಡುತ್ತಿದ್ದಾರೆ. ಇದು ವಿಕಸಿತ ಬಜೆಟ್ ಅಂತ ಹೇಳುತ್ತಿದ್ದಾರೆ. ವಿಕಸಿತ ಅಲ್ಲ, ಇದು ವಿನಾಶಕಾರಿ ಭಾರತ ಮಾಡುವ ಬಜೆಟ್ ಎಂದು ಕಿಡಿಕಾರಿದ್ದಾರೆ.

ನಿರುದ್ಯೋಗ ಸಮಸ್ಯೆ ನಿವಾರಣೆಗೆ ಕ್ರಮ ಇಲ್ಲ

ಬೆಳಗಾವಿ: ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಗುರುವಾರ ಮಂಡಿಸಿರುವ ಬಜೆಟ್ ಅಭಿವೃದ್ಧಿಗೆ ವಿಮುಖವಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಪ್ರತಿಕ್ರಿಯಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಪ್ರಸ್ತುತ ಅತ್ಯಂತ ಜ್ವಲಂತ ಸಮಸ್ಯೆಯಾಗಿರುವ ನಿರುದ್ಯೋಗ ಸಮಸ್ಯೆ ನಿವಾರಣೆಗೆ ಕೇಂದ್ರ ಸರಕಾರ ಯಾವುದೇ ಕ್ರಮ ಕೈಗೊಂಡಿಲ್ಲ ಎಂದಿದ್ದಾರೆ. ಬಿಜೆಪಿ ಕೋಟಿ ಕೋಟಿ ಉದ್ಯೋಗ ಸೃಷ್ಟಿಸುವುದಾಗಿ ನೀಡಿದ್ದ ಭರವಸೆಗಳೆಲ್ಲ ಭರವಸೆಯಾಗಿಯೇ ಉಳಿದಿದೆ. ಈ ಬಜೆಟ್ ನಲ್ಲಾದರೂ ಗಂಭೀರ ಕ್ರಮ ಘೋಷಿಸಬಹುದು ಎಂದು ನಿರೀಕ್ಷಿಸಲಾಗಿತ್ತು. ಆದರೆ ಅದೂ ಹುಸಿಯಾಗಿದೆ. ಕರ್ನಾಟಕಕ್ಕೆ ಈ ಬಜೆಟ್ ನಲ್ಲಿ ಏನನ್ನೂ ನೀಡಲಾಗಿಲ್ಲ. ರಾಜ್ಯದ ಪಾಲಿಗೆ ಅತ್ಯಂತ ನಿರಾಶಾದಾಯಕ ಬಜೆಟ್ ಇದಾಗಿದೆ ಎಂದು ಅವರು ಹೇಳಿದ್ದಾರೆ.

ಭಾರತ ಕೃಷಿ ಪ್ರಧಾನ ದೇಶ. ಆದರೆ ಕೃಷಿ ಅಭಿವೃದ್ಧಿಗ

ಲೋಕಸಭೆ ಚುನಾವಣೆ ಗೆಲ್ಲಲು ಬಿಜೆಪಿ ಎಲ್ಲರನ್ನೂ ಜೈಲಿಗೆ ಹಾಕುತ್ತಿದೆ: ಮಮತಾ ಬ್ಯಾನರ್ಜಿ

ಶಾಂತಿಪುರ: ಭೂ ಹಗರಣ ಪ್ರಕರಣದಲ್ಲಿ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೆನ್ ಅವರನ್ನು ಜಾರಿ ನಿರ್ದೇಶನಾಲಯ (ಇಡಿ) ಬಂಧಿಸಿದ ಬೆನ್ನಲ್ಲೇ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಬಿಜೆಪಿ ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಗೆಲ್ಲಲು ವಿರೋಧ ಪಕ್ಷದ ನಾಯಕರನ್ನು ಜೈಲಿಗೆ ಹಾಕುತ್ತಿದೆ ಎಂದು ಕಿಡಿಕಾರಿದ್ದಾರೆ.

ನಾಡಿಯಾ ಜಿಲ್ಲೆಯ ಶಾಂತಿಪುರದಲ್ಲಿ ಸಾರ್ವಜನಿಕ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದ ಬ್ಯಾನರ್ಜಿ, ನನ್ನನ್ನು ಜೈಲಿಗೆ ಕಳುಹಿಸಿದರೆ ಅದರಿಂದ ಹೊರಬರುತ್ತೇನೆ ಎಂದು ಹೇಳಿದರು. ರಾಜ್ಯದಲ್ಲಿ ಮುಂಬರುವ ಲೋಕಸಭೆ ಚುನಾವಣೆಗೆ ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಳ್ಳಲು ನಾವು ಉತ್ಸುಕವಾಗಿದ್ದೇವು ಆದರೆ ಆ ಪ್ರಸ್ತಾಪವನ್ನು ಕಾಂಗ್ರೆಸ್ ತಿರಸ್ಕರಿಸಿತು. ನಾವು ಮೈತ್ರಿ ಬಯಸಿದ್ದೆವು, ಆದರೆ ಕಾಂಗ್ರೆಸ್ ಅದಕ್ಕೆ ಸಿದ್ಧವಿಲ್ಲ ಎಂದು ಮಮತಾ ಹೇಳಿದ್ದಾರೆ. ಚುನಾವಣೆಯಲ್ಲಿ ಬಿಜೆಪಿಗೆ ಸಹಾಯ ಮಾಡಲು ಅವರು ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ (ಮಾರ್ಕ್ಸ್‌ವಾದಿ) ಜೊತೆ ಕೈಜೋಡಿಸಿದ್ದಾರೆ ಎಂದು ಆರೋಪಿಸಿದರು.

ಬಂಗಾಳದಲ್ಲಿ ಎನ್‌ಆರ್ಸಿ ನಡೆಯಲು ಬಿಡಲ್ಲ

ಮಮತಾ ಬ್ಯಾನರ್ಜಿ ಅವರು ಸಂಸದ ಮಹುವಾ ಮೊಯಿತ್ರಾ ಅವರನ್ನು ಸಂಸತ್ತಿನಿಂದ ಹೊರಹಾಕುವ ಬಗ್ಗೆ ಪ್ರಸ್ತಾಪಿಸಿದರು.

'ಮಹುವಾ ಅವರನ್ನು ಹೊರಹಾಕಲಾಗಿದೆ, ಆದರೆ ಮತದಾರರು ಅವರಿಗೆ ಮತ ಹಾಕಿ ಗೆಲ್ಲಿಸುತ್ತೀರಿ ಎಂದು ನನಗೆ ತಿಳಿದಿದೆ. ಬಂಗಾಳದಲ್ಲಿ ಎನ್‌ಆರ್ಸಿ ಮಾಡಲು ಬಿಡುವುದಿಲ್ಲ ಎಂದು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ರಾಜ್ಯದ ಜನತೆಗೆ ಏಕಕಾಲದಲ್ಲಿ ಹೇಳಿದ್ದಾರೆ. ಚುನಾವಣೆಗೂ ಮುನ್ನ ಬಿಜೆಪಿ ಎನ್‌ಆರ್ಸಿ ಮಾಡಲಿದೆ ಎಂದರು. ಮಹುವಾ ಈ ಸ್ಥಳದ ಪ್ರಜೆಯಲ್ಲವೇ? ನೀವು ಮತ ಚಲಾಯಿಸಿದರೆ, ನೀವು ನಾಗರಿಕರು. 'ಬಿಎಸ್‌ಎಫ್‌ನ ದೌರ್ಜನ್ಯ ಹೆಚ್ಚುತ್ತಿದೆ. ಇದರೊಂದಿಗೆ ಬಿಎಸ್ ಎಫ್ ಇನ್ ಲೈನ್ ಪರ್ಮಿಟ್ ಏಕೆ ನೀಡುತ್ತದೆ ಎಂದು ಪ್ರಶ್ನಿಸುವ ಧಾಟಿಯಲ್ಲಿ ಹೇಳಿದರು.

ಟಿಎಂಸಿ ಏಕಾಂಗಿಯಾಗಿ ಚುನಾವಣೆ ಎದುರಿಸಲಿದೆ

ಸಾರ್ವಜನಿಕರತ್ತ ಕೈತೋರಿದ ಟಿಎಂಸಿ ಮುಖ್ಯಸ್ಥರು, 'ನೀವು ನಮ್ಮನ್ನು ಬೆಂಬಲಿಸಿದರೆ, ಚುನಾವಣೆಯಲ್ಲಿ ಗೆದ್ದ ನಂತರ ನಾವು ದೆಹಲಿಯಲ್ಲಿ ಹಸ್ತಕ್ಷೇಪ ಮಾಡುತ್ತೇವೆ ಎಂದು ನಾನು ಭರವಸೆ ನೀಡುತ್ತೇನೆ. ಚುನಾವಣೆಯ ನಂತರ ಪ್ರಾದೇಶಿಕ ಪಕ್ಷಗಳು ಒಟ್ಟಾಗಿ ಹೇಗೆ ಮತ್ತು ಏನು ಮಾಡುತ್ತವೆ ಎಂಬುದನ್ನು ನಿರ್ಧರಿಸಲಾಗುತ್ತದೆ. ಇದೇ ವೇಳೆ ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಪಶ್ಚಿಮ ಬಂಗಾಳದಲ್ಲಿ ಏಕಾಂಗಿಯಾಗಿ ಸ್ಪರ್ಧಿಸುವುದಾಗಿ ಮಮತಾ ಬ್ಯಾನರ್ಜಿ ಸ್ಪಷ್ಟಪಡಿಸಿದ್ದಾರೆ. ಬಂಗಾಳದಲ್ಲಿ ಟಿಎಂಸಿ ಏಕಾಂಗಿ ಹೋರಾಟ ನಡೆಸಲಿದೆ ಎಂದು ಸ್ಪಷ್ಟಪಡಿಸಿದರು. ಏಕೆಂದರೆ ನಾವು ಮೈತ್ರಿ ಬಯಸಿದ್ದೆವು, ಆದರೆ ಕಾಂಗ್ರೆಸ್ ಸಿಪಿಎಂ ಜೊತೆಗಿದೆ. ನಾನು ಸಿಪಿಎಂ ಜೊತೆ ಹೋಗಲು ಸಾಧ್ಯವಿಲ್ಲ ಎಂದು ಹೇಳಿದರು.

ಸಹಕಾರ ಸಂಘ'ಗಳಲ್ಲಿನ ಸಾಲದ ಅಸಲು ಪಾವತಿಸಿದರೆ 'ಬಡ್ಡಿ ಮನ್ನಾ'ಗೆ ಸಚಿವ ಸಂಪುಟ ಅಸ್ತು



ಬೆಂಗಳೂರು: ಸಿಎಂ ಸಿದ್ಧರಾಮಯ್ಯ ಅವರು ಈಗಾಗಲೇ ರಾಜ್ಯದ ರೈತರು ಸಹಕಾರ ಸಂಘಗಳಲ್ಲಿ ಮಾಡಿರುವಂತ ಸಾಲದ ಅಸಲು ಪಾವತಿಸಿದ್ರೆ ಬಡ್ಡಿ ಮನ್ನಾ ಮಾಡೋದಾಗಿ ಘೋಷಣೆ ಮಾಡಿದ್ದರು. ಅದರಂತೆ ಇಂದು ಇಂತಹ ನಿರ್ಧಾರವನ್ನು ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಕಡತ ಮಂಡಿಸಿ ಅನುಮೋದನೆಯನ್ನು ಪಡೆಯಲಾಗಿದೆ. ಈ ಮೂಲಕ ರಾಜ್ಯದ ರೈತರಿಗೆ ಭರ್ಜರಿ ಸಿಹಿಸುದ್ದಿಯನ್ನು ನೀಡಲಾಗಿದೆ.

ಸಿಎಂ ಸಿದ್ಧರಾಮಯ್ಯ ಅವರ ನೇತೃತ್ವದಲ್ಲಿ ನಡೆದಂತ ಅರಾಜ್ಯ ಸಚಿವ ಸಂಪುಟ ಸಭೆ ಮುಕ್ತಾಯದ ಬಳಿಕ ಸುದ್ದಿಗೋಷ್ಠಿಯಲ್ಲಿ ಈ ವಿಷಯವನ್ನು ಸಚಿವ ಹೆಚ್.ಕೆ ಪಾಟೀಲ್ ಮಾಧ್ಯಮಗಳಿಗೆ ತಿಳಿಸಿದರು. ಸಹಕಾರಿ ಸಮೃದ್ಧ ಸೌಧ ನಿರ್ಮಾಣಕ್ಕೆ ಒಪ್ಪಿಗೆ.

ಸಹಕಾರ ಸಂಘಗಳ ಮೂಲಕ ಸಾಲ ಸೌಲಭ್ಯ. ಸಾಲ ಪಡೆದ ರೈತರ ಸುಸ್ತಿಬಡ್ಡಿ ಮನ್ನಾ. ಮಧ್ಯಮಾವಧಿ, ಧೀರ್ಘಾವದಿ ಸುಸ್ತಿ ಬಡ್ಡಿ ಮನ್ನಾ ಮಾಡಲಾಗುತ್ತದೆ. ಸರ್ಕಾರ ತೆಗೆದುಕೊಂಡಿದ್ದ ನಿರ್ಧಾರಕ್ಕೆ ಅನುಮೋದನೆ ನೀಡಲಾಗುತ್ತದೆ. 440 ಕೋಟಿ 20 ಲಕ್ಷ ಸುಸ್ತಿ ಬಡ್ಡಿ ಮನ್ನಾ. ಸಹಕಾರಿ ಸಂಘಗಳಿಂದ ಪಡೆದಿದ್ದ ಸಾಲದ ಮೇಲಿನ ಬಡ್ಡಿ, ಸುಸ್ತಿ ಬಡ್ಡಿ ಮನ್ನಾ ಮಾಡಲಾಗುತ್ತಿದೆ. ಸರ್ಕಾರ ನಿರ್ಧಾರಕ್ಕೆ ಸಂಪುಟದ ಅನುಮೋದನೆ ನೀಡಿದೆ ಎಂದರು.

ರಾಜ್ಯದಲ್ಲಿ ಪ್ರಪ್ರಥಮ ಲ್ಯಾಪ್ಟಾಪ್ ತಯಾರಿಕಾ ಘಟಕ ಆರಂಭ: ವಿಸ್ಟ್ರಾನ್ ಜತೆ 1500 ಕೋಟಿ ರೂ. ಹೂಡಿಕೆಗೆ ಸರ್ಕಾರ ಒಪ್ಪಂದ

ಬೆಂಗಳೂರು: ತೈವಾನ್ ಮೂಲದ ವಿಸ್ಟ್ರಾನ್ ಕಂಪನಿ ರಾಜ್ಯದಲ್ಲಿ ಲ್ಯಾಪ್ಟಾಪ್ ಉತ್ಪಾದನಾ ಘಟಕ ಆರಂಭಿಸಲು ಮುಂದಾಗಿದೆ. 1,500 ಕೋಟಿ ರೂ. ಹೂಡಿಕೆ ಮಾಡಲಿದೆ.

ಈ ಸಂಬಂಧ ವಿಸ್ಟ್ರಾನ್ ಅಧ್ಯಕ್ಷರು ರಾಜ್ಯ ಸರ್ಕಾರದೊಂದಿಗೆ ಅಧಿಕೃತ ಒಡಂಬಡಿಕೆಗೆ ಸಹಿ ಹಾಕಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಎಂ.ಬಿ. ಪಾಟೀಲ್, ವಿಸ್ಟ್ರಾನ್ ಕಂಪನಿ ಈಗಾಗಲೇ ಕೋಲಾರದಲ್ಲಿ ಬೇರೆ ಘಟಕ ಹೊಂದಿದೆ.

ಈ ಹೊಸ ಹೂಡಿಕೆ ಮೂಲಕ ರಾಜ್ಯದಲ್ಲಿ ಮೊದಲ ಲ್ಯಾಪ್ಟಾಪ್ ತಯಾರಿಕಾ ಘಟಕ ತೆರೆಯಲಿದೆ ಎಂದು ತಿಳಿಸಿದ್ದಾರೆ.

2026ರ ಜನವರಿ ಬೇಳೆಗೆ ಉತ್ಪಾದನೆ ಚಟುವಟಿಕೆಗಳು ಆರಂಭವಾಗಲಿದ್ದು, ಮೂರು ಸಾವಿರಕ್ಕೂ ಅಧಿಕ ಉದ್ಯೋಗಾವಕಾಶ ಸೃಷ್ಟಿಯಾಗಲಿದೆ. ಈ ಯೋಜನೆಗೆ ಬೆಂಗಳೂರು ಸಮೀಪ 32 ಎಕರೆ ಜಮೀನು ಕೇಳಿದ್ದು, ಒಂದು ವಾರದಲ್ಲಿ ಅಂತಿಮಗೊಳಿಸಲಾಗುವುದು ಎಂದು ಸಚಿವರು ತಿಳಿಸಿದ್ದಾರೆ. ನಮ್ಮ ಸರ್ಕಾರ ಕೈಗಾರಿಕೆ ಮತ್ತು ಹೂಡಿಕೆಗಳ ಪರವಾಗಿದ್ದು, ಉದ್ಯಮಸ್ನೇಹಿ ನೀತಿಗಳನ್ನು ಹೊಂದಿದೆ. ಜೊತೆಗೆ ಕಾಲಕಾಲಕ್ಕೆ ಹಲವು ಉಪಯುಕ್ತ ಉಪಕ್ರಮಗಳನ್ನು ಕೈಗೊಳ್ಳುತ್ತಿದೆ. ಬೆಂಗಳೂರಿನ ಜತೆಗೆ ರಾಜ್ಯದ ಉಳಿದ ಭಾಗಗಳಲ್ಲೂ ಆಧುನಿಕ ಉದ್ಯಮಗಳು ನೆಲೆಯೂರುವಂತೆ ಮಾಡಲು ಆದ್ಯತೆ ನೀಡುತ್ತಿದೆ ಎಂದು ಹೇಳಿದ್ದಾರೆ.

ರಾಜ್ಯದ ಪರವಾಗಿ ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ಮತ್ತು ವಿಸ್ಟ್ರಾನ್ ಕಂಪನಿಯ ಅಧ್ಯಕ್ಷ ಅಲೆಕ್ ಲಾಯ್ ಅವರು ಪರಸ್ಪರ ಒಪ್ಪಂದಕ್ಕೆ ಸಹಿ ಹಾಕಿದರು.

ಸೈಫರ್ ಪ್ರಕರಣ: ಪಾಕಿಸ್ತಾನ ಮಾಜಿ ಪ್ರಧಾನಿ ಇಮ್ರಾನ್ ಖಾನ್‌ಗೆ ೧೦ ವರ್ಷ ಜೈಲು ಶಿಕ್ಷೆ

ಇಸ್ಲಾಮಾಬಾದ್: ದೇಶದ ಗೌಪ್ಯತೆ ಸೋರಿಕೆ ಪ್ರಕರಣದಲ್ಲಿ ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರಿಗೆ ಮಂಗಳವಾರ 10 ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿದೆ ಎಂದು ಸರ್ಕಾರಿ ಮಾಧ್ಯಮ ಮತ್ತು ಅವರ ಪಕ್ಷದ ವಕ್ತಾರರು ತಿಳಿಸಿದ್ದಾರೆ.

ದೇಶದ ಗೌಪ್ಯತೆ ಸೋರಿಕೆಗೆ ಸಂಬಂಧಿಸಿದ ಸೈಫರ್ ಪ್ರಕರಣದಲ್ಲಿ ಪಾಕಿಸ್ತಾನ ತೆಹ್ರಿಕ್ – ಇ – ಇನ್ಸಾಫ್ ಪಕ್ಷದ ಮುಖ್ಯಸ್ಥ ಇಮ್ರಾನ್ ಖಾನ್ ಮತ್ತು ಉಪಾಧ್ಯಕ್ಷ(ಶಾ ಮಹಮೂದ್) ಖುರೇಷಿ ಅವರಿಗೆ ತಲಾ 10 ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿದೆ ಎಂದು ಪಕ್ಷದ ವಕ್ತಾರರು ಎಎಫ್‌ಪಿಗೆ ತಿಳಿಸಿದ್ದಾರೆ. ಸಾರ್ವತ್ರಿಕ ಚುನಾವಣೆ ಹೊಸ್ತಿಲಲ್ಲಿ ಇರುವ ಪಾಕಿಸ್ತಾನದಲ್ಲಿ ಪಿಟಿಐ ಪಕ್ಷದ ದಿಗ್ಗಜ ನಾಯಕರು ಜೈಲು ಸೇರುವಂತಾಗಿದ್ದು, ರಾಜಕೀಯವಾಗಿ ಅತಂತ್ರ ಪರಿಸ್ಥಿತಿ ನಿರ್ಮಾಣವಾಗಿದೆ. ಇಮ್ರಾನ್ ಖಾನ್ ಅವರು ಪ್ರಧಾನಿ ಆಗಿದ್ದ ವೇಳೆ ಅಮೆರಿಕ ಸರ್ಕಾರದ ವಿದೇಶಾಂಗ ಇಲಾಖೆ ಹಾಗೂ ಪಾಕಿಸ್ತಾನದ ರಾಯಭಾರಿ ನಡುವೆ ನಡೆದಿದ್ದ ಮಾತುಕತೆಯ ವಿವರಗಳನ್ನು ಬಹಿರಂಗವಾಗಿ ದೇಶದ ಜನತೆ ಮುಂದೆ ಕಾರ್ಯಕ್ರಮವೊಂದರಲ್ಲಿ ವಿವರಿಸಿದ್ದರು.

ಸಾಮಾನ್ಯವಾಗಿ ಒಂದು ದೇಶ ಮತ್ತೊಂದು ದೇಶದ ಜೊತೆ ಅಧಿಕೃತ ವಿದೇಶಾಂಗ ವ್ಯವಹಾರದ ಮಾತುಕತೆ, ರಾಯಭಾರಿ ಮಟ್ಟದ ಸಂವಹನಗಳು ನಡೆದಾಗ ಅವು ಗುಪ್ತ ಲಿಪಿಯಲ್ಲಿ ಇರುತ್ತವೆ. ಅದನ್ನು ಸಾಮಾನ್ಯ ಭಾಷೆಗೆ ಪರಿವರ್ತಿಸಿ ಬಹಿರಂಗಗೊಳಿಸುವಂತಿಲ್ಲ. ಆದರೆ, ಇಮ್ರಾನ್ ಖಾನ್ ಈ ದಾಖಲೆಯನ್ನು ಬಹಿರಂಗ ಮಾಡುವ ಮೂಲಕ ಸರ್ಕಾರಿ ರಹಸ್ಯ ದಾಖಲೆ ಕಾಯ್ದೆ ಉಲ್ಲಂಘನೆ ಮಾಡಿದ್ದಾರೆ ಎಂದು ಆರೋಪಿಸಲಾಗಿತ್ತು. ಈ ಸಂಬಂಧ ತನಿಖೆ ನಡೆಸಿ ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಕೆ ಮಾಡಲಾಗಿತ್ತು. ಇದರ ಆಧಾರದ ಮೇಲೆ ಇದೀಗ ನ್ಯಾಯಾಲಯ ಇಮ್ರಾನ್ ಖಾನ್‌ಗೆ 10 ವರ್ಷಗಳ ಕಾಲ ಜೈಲು ಶಿಕ್ಷೆ ವಿಧಿಸಿದೆ.

ಸಮಾನತೆ ರೂಪಿಸುವಲ್ಲಿ ಸಂವಿಧಾನವು ಪ್ರಮುಖ ಪಾತ್ರ: ವೀರೇಶ್ ಕಾರೆಕಲ್ಲು

ಬಳ್ಳಾರಿ: ಭಾರತದ ಸಂವಿಧಾನವು ದೇಶದಲ್ಲಿ ರಾಜಕೀಯ ಸಮಾನತೆ, ಆರ್ಥಿಕ ಸಮಾನತೆ ಹಾಗೂ ಸಾಮಾಜಿಕ ಸಮಾನತೆ ರೂಪಿಸುವಲ್ಲಿ ಪ್ರಧಾನ ಪಾತ್ರ ವಹಿಸಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಜಿಲ್ಲಾ ನೋಡಲ್ ಅಧಿಕಾರಿ ವೀರೇಶ ಕಾರೇಕಲ್ಲು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮದ ಅಂಗವಾಗಿ ಬಳ್ಳಾರಿ ತಾಲ್ಲೂಕಿನ ಕಾರೆಕಲ್ಲು ಗ್ರಾಮದ ಗ್ರಾಮ ಪಂಚಾಯಿತಿ ಆವರಣದಲ್ಲಿ ಹಮ್ಮಿಕೊಂಡಿದ್ದ ವೇದಿಕೆ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡಿದರು.

ದೇಶದ ಪ್ರತಿಯೊಬ್ಬ ಪ್ರಜೆಯೂ ಸಂವಿಧಾನದ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರೇಕಲ್ಲು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರುದ್ರಪ್ಪ ಅವರು ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಉಪಾಧ್ಯಕ್ಷ ಗೋಪಾಲ, ಮೋಕಾ ಸರ್ಕಾರಿ ಪ್ರಥಮ ಕಾಲೇಜಿನ ರಾಜ್ಯಶಾಸ್ತ್ರ ಉಪನ್ಯಾಸಕರಾದ ದೇವೇಂದ್ರ, ನಿಲಯಪಾಲಕರಾದ ಅರುಣ್ ಕುಮಾರ್, ಗಣೇಶ್, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರಾದ ಸ್ವಪ್ನ, ಉಷಾಕುಮಾರಿ, ಶಿವಪ್ಪ, ರುದ್ರಾಚಾರ್, ಶೇಖಣ್ಣ, ಬಸವರಾಜ ಮೊದಲಾದವರು ಉಪಸ್ಥಿತರಿದ್ದರು.

ಕುಮಾರಿ ಸಿರಿವೆನ್ನೆಲ ಪ್ರಾರ್ಥಿಸಿದರು. ಕಾರ್ಯಕ್ರಮದಲ್ಲಿ ಸಂವಿಧಾನ ಪ್ರಸ್ತಾವನೆ ಭೋಧಿಸಲಾಯಿತು.

ಮಹಿಳೆಯರಿಗೆ ಲೈಂಗಿಕ ಕಿರುಕುಳ ನೀಡಿದ ಇಬ್ಬರ ಬಂಧನ

ಬೆಂಗಳೂರು: ವಿಜಯನಗರ ಮತ್ತು ಮಹದೇವಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ವರದಿಯಾದ 2 ಪ್ರತ್ಯೇಕ ಘಟನೆಗಳಲ್ಲಿ ಮಹಿಳೆಯರಿಗೆ ಲೈಂಗಿಕ ಕಿರುಕುಳ ನೀಡಿದ ಇಬ್ಬರು ದುಷ್ಕರ್ಮಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಮೊದಲ ಪ್ರಕರಣದಲ್ಲಿ, ಡಿಸೆಂಬರ್ 30, 2023 ರಂದು ಹೋಟೆಲ್‌ನಲ್ಲಿ ಮಹಿಳಾ ಗ್ರಾಹಕಿಗೆ ಲೈಂಗಿಕ ಕಿರುಕುಳ ನೀಡಿದ್ದಕ್ಕಾಗಿ ಗೃಹಬಳಕೆಯ ಗ್ಯಾಸ್ ಡೆಲಿವರಿ ಏಜೆಂಟ್‌ನನ್ನು ವಿಜಯನಗರ ಪೊಲೀಸರು ಬುಧವಾರ ಬಂಧಿಸಿದ್ದಾರೆ. ಈ ಘಟನೆಯ ಸಿಸಿಟಿವಿ ಮತ್ತು ವಿಡಿಯೊ ದೃಶ್ಯಾವಳಿಗಳು ವೈರಲ್ ಆದ ನಂತರ ಘಟನೆ ಬೆಳಕಿಗೆ ಬಂದಿತ್ತು. ಸಂತ್ರಸ್ತೆ ಕ್ಯಾಶ್ ಕೌಂಟರ್ ಬಳಿ ಇದ್ದಾಗ ಅವರನ್ನು ಮುಟ್ಟುವಂತೆ ಸ್ನೇಹಿತರು ಸವಾಲು ಎಸೆದರು ಎಂದು ಆರೋಪಿ ಪೊಲೀಸರಿಗೆ ತಿಳಿಸಿದ್ದಾನೆ. ಸಂತ್ರಸ್ತೆ ಪೊಲೀಸರಿಗೆ ದೂರು ನೀಡಲು ನಿರಾಕರಿಸಿದ್ದರು. ಪೊಲೀಸರು ಹೋಟೆಲ್ ಮ್ಯಾನೇಜರ್ ನಿಂದ ದೂರನ್ನು ಸ್ವೀಕರಿಸಿ

ಕಾರ್ಯಾಚರಣೆ ನಡೆಸಿದ್ದರು.

ಬಂಧಿತ ಆರೋಪಿಯನ್ನು ಆರ್ಪಿಸಿ ಲೇಔಟ್‌ನ ಹಂಪಿ ನಗರದ ನಿವಾಸಿ ಚಂದನ್ ಎಂದು ಗುರುತಿಸಲಾಗಿದ್ದು, ಹೊಟೇಲ್‌ನಲ್ಲಿದ್ದ ಸಿಸಿಟಿವಿ ದೃಶ್ಯಾವಳಿಯಲ್ಲಿ ಆರೋಪಿ ಮಹಿಳೆಯ ಬಳಿ ಬಂದು ಹಿಂಬದಿಯಿಂದ ಆಕೆಯನ್ನು ಸ್ಪರ್ಶಿಸುತ್ತಿರುವುದು ಕಂಡುಬಂದಿದೆ. ಕಿರುಕುಳದ ನಂತರ ಅವರ ಸ್ನೇಹಿತರು ಶಿಳ್ಳೆ ಹೊಡೆದಿದ್ದಾರೆ ಎಂದು ವರದಿಯಾಗಿದೆ. ಘಟನೆ ಬಳಿಕ ಸಂತ್ರಸ್ತೆ ಆರೋಪಿಯೊಂದಿಗೆ ವಾಗ್ವಾದಕ್ಕಿಳಿದಿದ್ದು, ಜನರು ಜಮಾಯಿಸಲು ಆರಂಭಿಸಿದಾಗ ಆತ ಸ್ಥಳದಿಂದ ಪರಾರಿಯಾಗಿದ್ದರು. ಇದೀಗ ಪೊಲೀಸರು ಈತನನ್ನು ಬಂಧಿಸಿದ್ದಾರೆ.

ಎರಡನೇ ಪ್ರಕರಣದಲ್ಲಿ, ಜನವರಿ 5 ರಂದು ರಾತ್ರಿ 8.40 ರ ಸುಮಾರಿಗೆ ರಿಂಗ್ ರಸ್ತೆಯಲ್ಲಿ ಮಹಿಳೆಗೆ ಲೈಂಗಿಕ ಕಿರುಕುಳ ನೀಡಿದ 35 ವರ್ಷದ ಸುನೀಲ್ ಕುಮಾರ್ ಶರ್ಮಾ ಎಂಬಾತನನ್ನು ಮಹದೇವಪುರ ಪೊಲೀಸರು ಬಂಧಿಸಿದ್ದಾರೆ. ಸಂತ್ರಸ್ತೆ ತನ್ನ ಕಾರಿನಲ್ಲಿ ತನ್ನ ಸ್ನೇಹಿತರಿಗಾಗಿ ಪಾರ್ಕ್ ಎದುರಿನ ಪಾರ್ಕಿಂಗ್ ಜಾಗದಲ್ಲಿ ಕಾಯುತ್ತಿದ್ದಾಗ ಆರೋಪಿಗಳು ವಾಹನದ ಬಳಿ ಬಂದು ಆಕೆಯನ್ನು ದಿಟ್ಟಿಸಿ ಅಸಭ್ಯ ಸನ್ಜ್ಞೆಗಳನ್ನು ಮಾಡಲು ಪ್ರಾರಂಭಿಸಿದರು. ಈ ವೇಳೆ ಸಂತ್ರಸ್ತೆ ಕಾರಿನ ಬಾಗಿಲುಗಳನ್ನು ಲಾಕ್ ಮಾಡಿ ಸ್ಥಳದಿಂದ ಹೋಗಲು ಪ್ರಯತ್ನಿಸಿದರು. ಆದರೆ ಆಕೆಯ ಕಾರಿನ ಹಿಂದೆ ಇನ್ನೊಂದು ಕಾರು ನಿಂತಿದ್ದರಿಂದ ಆಕೆ ಹೋಗಲಾಗಲಿಲ್ಲ. ಈ ವೇಳೆ ದುಷ್ಕರ್ಮಿ ಆಕೆಯನ್ನೇ ದಿಟ್ಟಿಸುತ್ತಲೇ ಕಾರನ್ನು ಸುತ್ತತೊಡಗಿದ. ಸಂತ್ರಸ್ತೆ ನಂತರ ಸ್ಟೀರಿಂಗ್ ಕೆಳಗೆ ಅಡಗಿಕೊಂಡು ತನ್ನ ಸ್ನೇಹಿತರಿಗೆ ಕರೆ ಮಾಡಿದ್ದಾಳೆ. ಆದರೆ ಅಷ್ಟರೊಳಗೆ ಆರೋಪಿಗಳು ಅಲ್ಲಿಂದ ಪರಾರಿಯಾಗಿದ್ದರು.

ಈ ಘಟನೆ ಕುರಿತು ಸಂತ್ರಸ್ಥ ಮಹಿಳೆ ಟ್ವಿಟರ್ ಮೂಲಕ ಪೊಲೀಸರಿಗೆ ದೂರು ನೀಡಿದ್ದರು. ಪೋಸ್ಟ್ ನಲ್ಲಿ ನಗರ ಪೊಲೀಸರಿಗೆ ಟ್ಯಾಗ್ ಕೂಡ ಮಾಡಿದ್ದರು. ಆಕೆ ನೀಡಿದ ದೂರಿನ ಆಧಾರದ ಮೇಲೆ ಕಾರ್ಯಾಚರಣೆ ನಡೆಸಿದ್ದ ಮಹದೇವಪುರ ಪೊಲೀಸರು ಸಂತ್ರಸ್ತೆಯನ್ನು ಸಂಪರ್ಕಿಸಿ ಆಕೆಯಿಂದ ಹೆಚ್ಚಿನ ಮಾಹಿತಿ ಪಡೆದು ಆರೋಪಿಯನ್ನು ಬಂಧಿಸಿದ್ದಾರೆ.

ಸರ್ಕಾರಿ ಶಾಲೆಗೆ ದೇಣಿಗೆ

ಬೆಳಗಾವಿ: ಪ್ರಯತ್ನ ಸಂಘಟನೆಯ ಸದಸ್ಯೆಯರು ಡಿ. 30 ರಂದು ಬೆಳಗಾವಿಯ ಚೆನ್ನಮ್ಮ ನಗರದ ಸರ್ಕಾರಿ ಶಾಲೆಗೆ ಹೋಗಿ ಶಾಲೆಯ ಕುರಿತಂತೆ ಮಾತನಾಡಿದರು. ತಮ್ಮ ಸಂಘಟನೆಯಿಂದ ಶಾಲೆಗೆ ಕುಡಿಯುವ ನೀರಿನ ಟ್ಯಾಂಕ್ ಖರೀದಿಸಲು ರೂ. 15000/– ದೇಣಿಗೆ ನೀಡಿದರು. ವಿದ್ಯಾರ್ಥಿಗಳಿಗೆ ಬಿಸ್ಕತ್ ಕೊಟ್ಟು ಶುಭ ಕೋರಿದರು. ಈ ಸಂದರ್ಭದಲ್ಲಿ ಸಂಘಟನೆಯ ಅಧ್ಯಕ್ಷೆ ಶಾಂತಾ ಆಚಾರ್ಯ, ಬೀನಾ, ಶೀಲಾ, ಆರತಿ ಕೆ., ಆರತಿ ಭಟ್, ಲತಾ, ಉಷಾ, ಪದ್ಮಾ, ಶ್ವೇತಾ, ವರದ, ಶುಭಾ ಕೆ., ಶುಭಾ ಹೆಗ್ಡೆ, ಉಪಸ್ಥಿತರಿದ್ದರು.

ಬಿಯರ್ ದರ 12 ರೂ.ವರೆಗೆ ಹೆಚ್ಚಳ

ಬೆಂಗಳೂರು: ಬಿಯ

ಫೆ.4ಕ್ಕೆ ಅಂಬಿಗರ ಚೌಡಯ್ಯನವರ 904ನೇ ಜಯಂತಿ; ಬೃಹತ್ ಜನಜಾಗೃತಿ ಸಮಾವೇಶ: ಡಾ. ಸಾಯಿಬಣ್ಣ ತಳವಾರ

ಬೆಳಗಾವಿ: ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ 904ನೇ ಜಯಂತಿ ನಿಮಿತ್ತ ಫೆ. 4ರಂದು ಬೆಳಗಾವಿಯ ಸರ್ದಾರ್ ಮೈದಾನದಲ್ಲಿ ಬೃಹತ್ ಜನಜಾಗೃತಿ ಸ್ವಾಭಿಮಾನ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಕೋಳಿ-ಬೆಸ್ತ ಸಮಾಜದ ಜಿಲ್ಲಾ ಗೌರವಾಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಡಾ. ಸಾಯಿಬಣ್ಣ ತಳವಾರ ಹೇಳಿದರು.

ನಗರದ ಖಾಸಗಿ ಹೊಟೇಲ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಫೆ. 4ರಂದು ಬೆಳಗಾವಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕುಲ ಬಾಂಧವರ ಸಹಯೋಗದೊಂದಿಗೆ ನಿಜಶರಣ ಅಂಬಿಗರ ಚೌಡಯ್ಯ ಅವರ 904 ನೇ ಜಯಂತಿ ಉತ್ಸವವನ್ನು ಅದ್ದೂರಿಯಾಗಿ ಆಚರಿಸುವ ನಿಟ್ಟಿನಲ್ಲಿ ಈ ಜಯಂತಿಯನ್ನು ಬೃಹತ್ ಜನಜಾಗೃತಿ ಸ್ವಾಭಿಮಾನ ಸಮಾವೇಶವನ್ನಾಗಿ ಆಚರಿಸಲು ಕರೆ ನೀಡಲಾಗಿದೆ ಎಂದು ತಿಳಿಸಿದರು.

ರಾಜ್ಯದ ಬಹುತೇಕ ಜಿಲ್ಲೆಯಲ್ಲಿ ಜ. 21ರಂದೇ ಜಯಂತಿಯನ್ನು ಆಚರಿಸಿದ್ದಾರೆ. ಆದರೆ ಫೆ. 4ಕ್ಕೆ ಏಕೆ ಈ ಜಯಂತಿ ಆಚರಣೆ ಎಂದರೆ ಛತ್ರಪತಿ ಶಿವಾಜಿ ಮಹಾರಾಜರ ಆತ್ಮೀಯ ವೀರ ಧೀರ ಕೋಳಿ ಸಮಾಜದ ಹೆಮ್ಮೆಯ ಪುತ್ರ ಹಾಗೂ ಶಿವಾಜಿ ಮಹಾರಾಜರ ಸೇನೆಯ ಸಿಂಹ ಎಂದೆ ಗುರ್ತಿಸಿಕೊಂಡ ತಾನಾಜಿ ಮಾಲಸೂರೆ ಅವರು ಮೊಘಲರ ಸೈನ್ಯದೊಂದಿಗೆ ಹೋರಾಡಿ ಮಡಿದ ದಿನವಾಗಿದ್ದರಿಂದ ಅವರ ಪುಣ್ಯ ದಿನವಾದ ಫೆ. 4ಕ್ಕೆಈ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದರು.

ಅಲ್ಲದೇ ಬೆಳಗಾವಿ ನಗರ ಮತ್ತು ಜಿಲ್ಲೆಯಲ್ಲಿ ಲಕ್ಷಾಂತರ ಸಂಖ್ಯೆಯಲ್ಲಿ ಕೋಳಿ - ಬೆಸ್ತ ಸಮಾಜ ಬಾಂಧವರಿದ್ದರೂ ಅಸಂಘಟಿತವಾಗಿದ್ದಾರೆ.

ಆದ್ದರಿಂದ ಜಿಲ್ಲೆಯಲ್ಲಿ ಸಂಘ ಬಲಗೊಳ್ಳಲು ಈ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಕೋಳಿ ಸಮಾಜ ಎಸ್ಟಿಗೆ ಸೇರಿಸಲು ಒತ್ತಾಯ: ಕೋಳಿ, ಟೋಕರಿ ಕೋಲಿ, ಕಬ್ಬಲಿಗ, ಗಂಗಾತಮ, ಬೆಸ್ತ ಸಮಾಜವು ಸಾಮಾಜಿಕ, ಆರ್ಥಿಕ, ರಾಜಕೀಯ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿದೆ. ಈ ಸಮಾಜದ ಕೆಲವು ಪರ್ಯಾಯ ಪದಗಳು ಪರಿಶಿಷ್ಟ ಪಂಗಡದಲ್ಲಿದ್ದು, ಇವುಗಳಿಂದ ಬಿಟ್ಟು ಹೋದ ಕೋಲಿ, ಕಬ್ಬಲಿಗ, ಅಂಬಿಗ, ಬೆಸ್ತ, ಗಂಗಾಮತಗಳನ್ನೂ ಕರ್ನಾಟಕದಲ್ಲಿರುವ ಕೋಲಿ ಸಮಾಜವನ್ನು ಎಸ್‌ಟಿ ಪಟ್ಟಿಗೆ ಸೇರಿಸುವಂತೆ ಬೆಳಗಾವಿಯಲ್ಲಿ ನಡೆಯುವ ಬೃಹತ್ ಜನಜಾಗೃತಿ ಸ್ವಾಭಿಮಾನ ಸಮಾವೇಶದಲ್ಲಿ ರಾಜ್ಯ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದು ತಿಳಿಸಿದರು.

ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳು ಭಾಗಿ: ಅಂದು ಬೆಳಗ್ಗೆ 8 ಗಂಟೆಗೆ ಎರಡು ಸಾವಿರ ಶರಣೆಯರಿಂದ ಕುಂಭ ಮೇಳ, ಕಿಲ್ಲಾ ಕೆರೆಯಿಂದ ಸರ್ದಾರ್ ಮೈದಾನದ ವರೆಗೆ ಬೃಹತ ಮೆರವಣಿಗೆ ನಡೆಯಲಿದೆ. ಈ ಮೆರವಣಿಗೆಯಲ್ಲಿ ಡೊಳ್ಳು, ಜಾಂಜಪದಕ, ಕಂಸಾಳೆ, ಆನೆ, ಒಂಟೆ ಕುದುರೆ ವಾದ್ಯ ಮೇಳ ಸೇರಿದಂತೆ ವಿವಿಧ ಕಲಾ ತಂಡಗಳು ಭಾಗವಹಿಸಲಿವೆ. ಅಲ್ಲದೇ ಈ ಸಮಾವೇಶದಲ್ಲಿ ಉತ್ತರ ಕರ್ನಾಟಕ 35 ಸಾವಿರ ಜನ ಸೇರುವ ನಿರೀಕ್ಷೆ ಎಂದ ಅವರು, ಈ ಸಮಾವೇಶಕ್ಕೆ ಬರುವ ಜನರಿಗೆ ಊಟದ ವ್ಯವಸ್ಥೆಯನ್ನು ಮಾಡಲಾಗಿದೆ. ಸಿಪಿಎಡ್ ಮೈದಾನದಲ್ಲಿ ವಾಹನ ನಿಲುಗಡೆಗೆ ವ್ಯವಸ್ಥೆ ಕೂಡಾ ಮಾಡಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬೆಳಗಾವಿ ಕೋಳಿ-ಬೆಸ್ತ ಸಮಾಜ ಸಂಘದ ಪ್ರಧಾನ ಕಾರ್ಯದರ್ಶಿ ಸಂಜಯ ಪಾಟೀಲ ಕೋಳಿ-ಬೆಸ್ತ ಸಮಾಜ ಮುಖಂಡರಾದ ದಿಲೀಪ್ ಕುರಂದವಾಡೆ, ಅಮರೇಶ್ ಕಾಮನಕೇರಿ, ಬೆಳಗಾವಿ ಮಾಜಿ ಉಪ ಮಹಾಪೌರರು ಮದುಶ್ರೀ ಪೂಜಾರಿ, ಗಿರಿರಾಜ ಸಿರಗೆ ಸೇರಿದಂತೆ ಹಲವು ಮುಖಂಡರು ಇದ್ದರು.

ಪೇಟಿಎಂಗೆ ನೋಟಿಸ್ ನೀಡಿದ ಆರ್‌ಬಿಐ

ಬೆಂಗಳೂರು: ಬ್ಯಾಂಕಿಂಗ್ ನಿಯಮಗಳ ಉಲ್ಲಂಘನೆ ಹಿನ್ನೆಲೆ ಪೇಟಿಎಂಗೆ ಆರ್ಬಿಐ ನೋಟಿಸ್ ನೀಡಿದ್ದು, ಪೇಟಿಎಂ ಹೊಸ ಡೆಪಾಸಿಟ್ ಪಡೆಯುವಂತಿಲ್ಲ ಎಂದು ಸೂಚನೆ ನೀಡಿದೆ.

ಪೇಟಿಎಂ ಪೇಮೆಂಟ್ಸ್ ಬ್ಯಾಂಕ್‌ಗೆ ಆರ್ಬಿಐ ನಿರ್ಬಂಧ ಹೇರಿದೆ. ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ಯಾವುದೇ ಹೊಸ ಖಾತೆ ರಚಿಸಲು ಮತ್ತು ಡೆಪಾಸಿಟ್ ಪಡೆಯುವಂತಿಲ್ಲ.

ವಿವಿಧ ನಿಯಮಗಳನ್ನು ಉಲ್ಲಂಘಿಸಿರುವುದು ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ಪೇಟಿಎಂ ಪೇಮೆಂಟ್ಸ್ ಬ್ಯಾಂಕ್‌ಗೆ ನೋಟಿಸ್ ನೀಡಲಾಗಿದೆ.

ಇನ್ನು ಫೆಬ್ರವರಿ 29ರ ನಂತರ ಪೇಮೆಂಟ್ಸ್ ಬ್ಯಾಂಕ್ ಖಾತೆಗೆ ವ್ಯಾಲಟ್, ಫಾಸ್ಟ್ಯಾಗ್ ಇತ್ಯಾದಿ ಪ್ರೀಪೇಯ್ಡ್ ಯಂತ್ರಗಳಿಗೆ ಟಾಪ್‌ಅಪ್ ಹಾಕಿಸುವಂತಿಲ್ಲ ಎಂದು ಆರ್ಬಿಐ ನಿರ್ಬಂಧ ವಿಧಿಸಿ ಆದೇಶ ಹೊರಡಿಸಿದೆ.

ವಿದ್ಯಾರ್ಥಿಗಳಿಗೆ ಸುಲಭ ರೀತಿಯಲ್ಲಿ ಅರ್ಥೈಸಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

ಬಳ್ಳಾರಿ:ಮಕ್ಕಳಿಗೆ ಅರ್ಥವಾಗುವ ರೀತಿಯಲ್ಲಿ ಕಲಿಕಾಂಶಗಳನ್ನು ಸರಳೀಕರಣಗೊಳಿಸಿ ಉತ್ತೀರ್ಣರಾಗಲು ಅಗತ್ಯವಿರುವ ವಿಷಯವಾರು ಮುಖ್ಯಾಂಶಗಳನ್ನು ಪಟ್ಟಿ ಮಾಡಿಕೊಂಡು ಅಭ್ಯಾಸ ಮಾಡಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ 2023-24 ನೇ ಸಾಲಿನಲ್ಲಿ ಎಸ್ ಎಸ್ ಎಲ್ ಸಿ ವಾರ್ಷಿಕ ಫಲಿತಾಂಶ ಸುಧಾರಣೆಗಾಗಿ ಮತ್ತು ನಕಲು ಮುಕ್ತ ಪರೀಕ್ಷೆಯನ್ನು ನಡೆಸಲು ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ಬುಧವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಿಧಾನಗತಿಯ ಕಲಿಕೆಯ ಮಕ್ಕಳಿಗೆ

ಹೆಚ್ಚಿನ ಆಧ್ಯತೆ ನೀಡಲು ಸಾಧ್ಯವಾಗುತ್ತದೆ. ಮ್ಯಾಪ್ ಪಾಯಿಂಟಿಂಗ್ ಚಿತ್ರಗಳ ಬಿಡಿಸಿ ಭಾಗ ಗುರುತಿಸುವುದು, ಪ್ರಮೇಯ ಅಭ್ಯಾಸ ಮಾಡಿಸುವುದು ಕಲಿಸಬೇಕು ಎಂದು ಸೂಚಿಸಿದರು.

ಮಕ್ಕಳ ಕಲಿಕೆಯ ನಿರಂತರ ಮೇಲ್ವಿಚಾರಣೆ ಮತ್ತು ವಿಶ್ಲೇಷಣೆ ಮಾಡಿ ಉಳಿದ 53 ದಿನಗಳಲ್ಲಿ ಮಕ್ಕಳಿಗೆ ಪರೀಕ್ಷೆಯನ್ನು ಧೈರ್ಯದಿಂದ ಎದುರಿಸಲು ಎಲ್ಲಾ ರೀತಿಯ ಸನ್ನದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಹೇಳಿದರು.

ದತ್ತು ನೀಡಿರುವ ಅಧಿಕಾರಿಗಳು ಕಡ್ಡಾಯವಾಗಿ ಶಾಲೆಗೆ ಭೇಟಿ ನೀಡಿ ಅಗತ್ಯ ಮಾರ್ಗದರ್ಶನ ನೀಡಿ ಕಲಿಕಾ ಗುಣಮಟ್ಟದ ಹೆಚ್ಚಳದ ಬಗ್ಗೆ ನಿಗಾ ವಹಿಸಿ ಎಲ್ಲಾ ಮಕ್ಕಳು ಉತ್ತೀರ್ಣರಾಗಲು ಅಗತ್ಯ ಕ್ರಮ ವಹಿಸಬೇಕು ಎಂದು ಮುಖ್ಯ ಶಿಕ್ಷಕರಿಗೆ ಕರೆ ನೀಡಿದರು.

ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಮಾತನಾಡಿ,ಗಣಿತ, ವಿಜ್ಞಾನ ಹಾಗೂ ಇಂಗ್ಲಿಷ್ ವಿಷಯಗಳ ಮುಖ್ಯ ಶಿಕ್ಷಕರು, ಪಾಠಗಳನ್ನು ಅರ್ಥವಾಗುವ ರೀತಿಯಲ್ಲಿ ಬೋಧನೆ ಮಾಡಬೇಕು ಹಾಗೂ ಫಲಿತಾಂಶ ಸುಧಾರಣೆ ಕುರಿತ ಕ್ರಿಯಾ ಯೋಜನೆ ಮಾಡಿಕೊಂಡು ಅದನ್ನು ಬಾಕಿ ಉಳಿದಿರುವ ದಿನಗಳಲ್ಲಿ ಅನುಪಾಲನ ಮಾಡಿ ಎಲ್ಲಾ ಮಕ್ಕಳು ಉತ್ತೀರ್ಣವಾಗುವ ರೀತಿಯಲ್ಲಿ ಶ್ರಮಿಸಬೇಕು ಎಂದು ಸಲಹೆ ನೀಡಿದರು.

ಕಳೆದ ವರ್ಷದ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಕಡಿಮೆ ಸಾಧನೆ ಮಾಡಿದ ಆಯ್ಕೆ ಮುಖ್ಯ ಶಿಕ್ಷಕರನ್ನು ಫಲಿತಾಂಶ ಕಡಿಮೆ ಬರಲು ಹಾಗೂ ಫಲಿತಾಂಶ ಸುಧಾರಣೆಗೆ ಕೈಗೊಂಡ ಕ್ರಮಗಳ ಬಗ್ಗೆ ವಿಚಾರಿಸಿದರು.

ಶಾಲೆಗೆ ಭೇಟಿ ನೀಡಿದ ನೋಡಲ್ ಅಧಿಕಾರಿಗಳಿಗೆ ಶಾಲಾ ಸಂದರ್ಶನದಲ್ಲಿ ಪರಿಶೀಲಿಸಿದ ಅಂಶಗಳು ಹಾಗೂ ನೀಡಿದ ಮಾರ್ಗದರ್ಶನದ ಬಗ್ಗೆ ಮಾಹಿತಿ ಪಡೆದರು.

ಇದೇ ಸಂದರ್ಭದಲ್ಲಿ ಜಿಲ್ಲೆಯ ಶೇಕಡವಾರು ಫಲಿತಾಂಶ ಉತ್ತಮಗೊಳಿಸಲು ಬೇಕಾದ ಅಗತ್ಯವಿರುವ ಎಲ್ಲಾ ರೀತಿಯ ಸಹಕಾರ ಸಹಾಯ ಮಾಡುವುದಾಗಿ ತಿಳಿಸಿದರು.

ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಬಿ.ಉಮಾದೇವಿ, ಡಯಟ್‌ನ ಪ್ರಾಚಾರ್ಯರಾದ ಹನುಮಕ್ಕ ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ನೋಡಲ್ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ತಾಲೂಕಿನ ಸರ್ಕಾರಿ ಮತ್ತು ಅನುದಾನಿತ ಆಯ್ಕೆ ಪ್ರೌಢಶಾಲಾ ಮುಖ್ಯ ಶಿಕ್ಷಕರು ಉಪಸ್ಥಿತರಿದ್ದರು.

ಸ್ವಚ್ಛತಾ ಯಂತ್ರಕ್ಕೆ ಯುವ ನಾಯಕ ರಾಹುಲ್ ಜಾರಕಿಹೊಳಿ ಚಾಲನೆ

ಬೆಳಗಾವಿ: ನಗರದ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆಯನ್ನು ಕಾಪಾಡುವ ಉದ್ದೇಶದಿಂದ ಸತೀಶ ಜಾರಕಿಹೊಳಿ ಫೌಂಡೇಶನ್ ವತಿಯಿಂದ ನೀಡಿರುವ ಸ್ವಚ್ಛತಾ (ಯಂತ್ರದ) ಮಷಿನ್‌ಗೆ ಯುವ ನಾಯಕ ಜಾರಕಿಹೊಳಿ ಅವರು ಚಾಲನೆ ನೀಡಿದರು.

ಈ ವೇಳೆ ಯುವ ನಾಯಕ ರಾಹುಲ ಜಾರಕಿಹೊಳಿ ಅವರು ಮಾತನಾಡಿ, ಆರೋಗ್ಯಕರ ಹಾಗೂ ಸ್ವಚ್ಛ ನಗರವನ್ನಾಗಿ ರೂಪಿಸುವ ಉದ್ದೇಶದಿಂದ ಸ್ವಚ್ಛತಾ (ಯಂತ್ರದ) ಮಷಿನ್ ಇಂದಿನಿಂದಲೇ ಕಾರ್ಯನಿರ್ವಸಲಿದೆ. ತಂದೆಯವರಾದ ಸಚಿವ ಸತೀಶ ಜಾರಕಿಹೊಳಿಯವರ ಮಾರ್ಗದರ್ಶನದಂತೆ ಬೆಳಗಾವಿ ಶ್ರೀಗರದಲ್ಲಿರುವ ಶ್ರೀ ಜಗಜ್ಯೋತಿ ಬಸವೇಶ್ವರ ಅನುಭವ ಮಂಟಪದಲ್ಲಿ ಪ್ರಾರಂಭಿಸಲಾಗಿದೆ ಎಂದು ಹೇಳಿದರು.

ನಗರವನ್ನು ಸ್ವಚ್ಛತೆಯಿಂದ ಕಾಪಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಪರಿಸರವನ್ನು ಸುಸಜ್ಜಿತವಾಗಿ ನೋಡುಕೊಳ್ಳಬೇಕಿದೆ. ನಗರ

ವ್ಯಾಪ್ತಿಯಲ್ಲಿ ಹುಲ್ಲು ಬೆಳೆದಿರುವ ಪ್ರದೇಶದಲ್ಲಿ ಸ್ವಚ್ಛತೆ ಕಾಪಾಡುವುದು ದೃಷ್ಟಿಕೋನದಿಂದ ನಾವು ಪ್ರಯತ್ನ ಮಾಡಲಾಗುತ್ತಿದೆ. ಹೀಗಾಗಿ ಸ್ವಚ್ಛತಾ (ಯಂತ್ರದ) ಮಷಿನ್ ದಿಂದ ಸ್ವಚ್ಛತಾ ಕಾರ್ಯ ನಡೆಯಲಿದೆ ಎಂದು ಹೇಳಿದರು.

ಜನಬೀಡಿ ಪ್ರದೇಶದಲ್ಲಿ ಹುಲ್ಲು ಬೆಳೆದು ವಾಹನ ಸವಾರರು, ಪಾದಚಾರಿಗಳಿಗೆ ಕಿರಿಕಿರಿಯಾಗುತ್ತಿದೆ. ಹೀಗಾಗಿ ನಗರದ ಸ್ವಚ್ಛತೆ ಮುಂದಾಗಿದ್ದೆವೆ. ಜನರ ಆರೋಗ್ಯ ಸಂರಕ್ಷಿಸುವ ಜತೆಗೆ ರಸ್ತೆಗಳ ಸ್ವಚ್ಛತೆ ಕಾಪಾಡಲು ಯಂತ್ರಗಳನ್ನು ಬಳಸಲಾಗುತ್ತಿದೆ,'ಎಂದರು.

ಪುರಸಭೆ ಸದಸ್ಯ ಡಾ.ದಿನೇಶ ನಾಶಿಪುಡಿ ಮಾತನಾಡಿ, ಶ್ರೀ ಬಸವೇಶ್ವರ ಅನುಭವ ಮಂಟಪದ ವ್ಯಾಪ್ತಿಯಲ್ಲಿ ಹುಲ್ಲು ಬೆಳದು ಅಸ್ವಚ್ಛತೆ ನಿರ್ಮಾಣವಾಗಿದೆ.

ಹೀಗಾಗಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದು ಸತೀಶ ಜಾರಕಿಹೊಳಿ ಫೌಂಡೇಶನ್ ದಿಂದ ಉಚಿತವಾಗಿ ಸ್ವಚ್ಛತಾ ಮಿಷನ್ ನೀಡಿದ್ದಾರೆ. ಅವರ ಸಹಕಾರದಿಂದ ನಗರವನ್ನು ನಾವು ಸ್ವಚ್ಛತೆಯಿಂದ ಕಾಪಾಕೊಳ್ಳಲು ಅನುಕೂಲವಾಗಿದೆ. ಅವರ ಸಮಾಜ ಸೇವೆಗೆ ಧನ್ಯವಾದಗಳು ಎಂದು ತಿಳಿಸಿದರು.

ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡುವ ಹಿತದೃಷ್ಟಿಯಿಂದ ರಾಜ್ಯದಲ್ಲಿ ಮೊದಲ ಬೆಳಗಾವಿಯಲ್ಲಿ ಸ್ವಚ್ಛತಾ ಮಿಷನ್ ಕಾರ್ಯನಿರ್ವಸಲಿದೆ.

ಈ ವೇಳೆ ಕೆಪಿಸಿಸಿ ಸದಸ್ಯ ಮಲಗೌಡ ಪಾಟೀಲ್, ಗಿರೀಶ್ ನಾಯ್ಕ್, ಸುದ್ನವ್ ನಾಶಿಪುಡಿ, ವಿಜಯ್ ತಳವಾರ, ತಪನ ಪಾಟೀಲ, ವಿಜಯ ವಂಟಮೂರಿ, ನಾಗರಿಕರು ಉಪಸ್ಥಿತರಿದ್ದರು.

ಕಾಲೇಜ್ ಕಟ್ಟಡದಿಂದ ಜಿಗಿದು ಬಿಬಿಎ ವಿದ್ಯಾರ್ಥಿ ಆತ್ಮಹತ್ಯೆ

ಆನೇಕಲ್: ಕಟ್ಟಡದಿಂದ ಜಿಗಿದು ಬಿಬಿಎ ವಿದ್ಯಾರ್ಥಿ ಆತ್ಮಹತ್ಯೆ ಮಾಡಿಕೊಂಡಿರುವಂತಹ ಘಟನೆ ನಿನ್ನೆ ಬೆಂಗಳೂರಿನ ಹೊಸ ರೋಡ್ ಬಳಿಯ ಪಿಇಎಸ್ ಕಾಲೇಜಿನಲ್ಲಿ ನಡೆದಿದೆ.

ಇಂಜಿನಿಯರಿಂಗ್ ವಿಭಾಗದ ಆರನೇ ಮಹಡಿಯಿಂದ ಹಾರಿ ವಿಘ್ನೇಶ್.ಕೆ(19) ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಹೊಂಗಸಂದ್ರದ ರಾಘವೇಂದ್ರ ಲೇಔಟ್ ನಿವಾಸಿ. ಬಿಬಿಎ ಪ್ರಥಮ ವರ್ಷದ ವ್ಯಾಸಂಗ ಮಾಡುತ್ತಿದ್ದ.

ಆತ್ಮಹತ್ಯೆಗೆ ನಿಖರ ಕಾರಣ ಇನ್ನೂ ತಿಳಿದು ಬಂದಿಲ್ಲ. ಪರಪ್ಪನ ಅಗ್ರಹಾರ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

ಈ ಕುರಿತಾಗಿ ಆಗ್ನೇಯ ವಿಭಾಗದ ಡಿಸಿಪಿ ಸಿ.ಕೆ ಬಾಬ ಹೇಳಿಕೆ ನೀಡಿದ್ದು, ಪರಪ್ಪನ ಅಗ್ರಹಾರ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ. ವಿದ್ಯಾರ್ಥಿ ಬೆಳಗ್ಗೆ 11 ಗಂಟೆ ಸುಮಾರಿಗೆ ಕಾಲೇಜಿಗೆ ಹೋಗಿದ್ದ. ನಿನ್ನೆ ಸಂಜೆ 4.30 ರ ಸುಮಾರಿಗೆ ಫ್ರೆಂಡ್ಸ್ ಜೊತೆ ಕಾಫಿ ಕುಡಿದಿದ್ದಾನೆ.

ಅದಾದ ಮೇಲೆ 6 ಗಂಟೆ ಸುಮಾರಿಗೆ ತಾನು

ಏಕಾಏಕಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಘಟನಾ ಸ್ಥಳದಲ್ಲೇ ಸಾವನ್ನಪ್ಪಿದ್ದು ಮಾಹಿತಿ ಬಂದ ಕೂಡಲೇ ನಮ್ಮ ಸಿಬ್ಬಂದಿ ಭೇಟಿ ನೀಡಿದ್ದಾರೆ.

ಸದ್ಯಕ್ಕೆ ವಿದ್ಯಾರ್ಥಿ ಸಾವಿಗೆ ಯಾವ ಕಾರಣ ಗೊತ್ತಾಗಿಲ್ಲ. ಮನೆಯನ್ನ ಪರಿಶೀಲನೆ ಮಾಡಲಾಗಿದೆ. ತನಿಖೆ ನಂತರ ಆತ್ಮಹತ್ಯೆಗೆ ಕಾರಣ ಏನು ಎಂದು ಗೊತ್ತಾಗಲಿದೆ ಎಂದು ಹೇಳಿದ್ದಾರೆ.

ಉನ್ನತ ಶಿಕ್ಷಣದತ್ತ ಹೆಚ್ಚಿನ ಗಮನ ನೀಡಲು ಮೋಕ್ಷಾತ್ಮನಂದ ಸ್ವಾಮಿಜಿ ಕರೆ

ಬೆಳಗಾವಿ: ದ್ವಿತಿಯ ಪಿಯುಸಿ ನಂತರದ ವಿದ್ಯಾಭ್ಯಾಸ ಅತೀ ಮಹತ್ವದ್ದಾಗಿದ್ದು, ಈ ಬಗ್ಗೆ ವಿದ್ಯಾರ್ಥಿಗಳು ಹೆಚ್ಚಿನ ನಿಗಾ ವಹಿಸಿ ಉನ್ನತ ಶೀಕ್ಷಣ ಪಡೆಯುವಲ್ಲಿ ಮುಂದಕ್ಕೆ ಬರಬೇಕೆಂದು ಬೆಳಗಾವಿ ರಾಮಕೃಷ್ಣ ಮಿಶನ ಆಶ್ರಮದ ಮೋಕ್ಷಾತ್ಮನಂದಜಿ ಸ್ವಾಮಿಜಿ ಅವರು ಹೇಳಿದರು.

ಇಲ್ಲಿಯ ಭರತೇಶ ಶಿಕ್ಷಣ ಸಂಸ್ಥೆಯ ಭರತೇಶ ಪಿಯು ಮಹಾವಿದ್ಯಾಲಯದ ವಿದ್ಯಾರ್ಥಿಗಳ ಬಿಳ್ಕೋಡುಗೆ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿ ಮಾತನಾಡಿದ ಅವರು, ಐದು ವರ್ಷಗಳ ನಿರಂತರ ಅಧ್ಯಯನ ನಿಮ್ಮ ಜೀವನದ ದಿಕ್ಕನ್ನು ಬದಲಿಸಬಲ್ಲದು. ಉತ್ತಮ ಆರೋಗ್ಯ, ಮಾನಸಿಕ ಸಕ್ಷಮತೆ, ಗುರಿ ಮುಟ್ಟುವ ಛಲದೊಂದಿಗೆ ಆತ್ಮವಿಶ್ವಾಸದೊಂದಿಗೆ ಮುನ್ನಡೆದರೆ ಮಾತ್ರ ಜೀವನದಲ್ಲಿ ಯಶಸ್ಸು ಕಾಣಲು ಸಾದ್ಯ ಎಂದು ಅವರು ತಿಳಿಸಿದರು.

ಭರತೇಶ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ವಿನೋದ ದೊಡ್ಡಣ್ಣವರ ಅವರು ಅಧ್ಯಕ್ಷತೆ ವಹಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ಸಮಾರಂಭದಲ್ಲಿ ರಾಷ್ಟ್ರ ಮಟ್ಟದ ಕ್ರೀಡೆಯಲ್ಲಿ ಆಯ್ಕೆಯಾದ ಕ್ರೀಡಾಪಟುಗಳನ್ನು ಸನ್ಮಾನಿಸಲಾಯಿತು. ಅದರಂತೆ 2023-24 ನೇ ಸಾಲಿನ ಅತ್ಯುತ್ತಮ ವಿದ್ಯಾರ್ಥಿಗಳೆಂದು ಆಯ್ಕೆಯಾದ ಲಕ್ಷ್ಮೀ ನಾಯ್ಕ, ಭೂಮಿ ಜಕ್ಕನ್ನವರ, ಶೃಷ್ಠಿ ಬುರಾನಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಮಹಾವಿದ್ಯಾಲಯ ಆಡಳಿತ ಮಂಡಳಿಯ ಅಧ್ಯಕ್ಷ ಹೀರಾಚಂದ ಕಲಮನಿ, ಸದಸ್ಯರಾದ ಅಶೋಕ ಕಾಡಾಪೂರೆ, ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.ಪ್ರಾಚಾರ್ಯ ಸುನಿತಾ ದೇಶಪಾಂಡೆ ಅತಿಥಿಗಳನ್ನು ಸ್ವಾಗತಿಸಿದರು. ಮಾಧವಿ ಪಾಟೀಲ ಪರಿಚಯಿಸಿದರು. ಸುಧಾ ಚಿಕ್

24 ಗಂಟೆಗಳಲ್ಲಿ ಕಡತಗಳ ವಿಲೇವಾರಿ ಕೈಗೊಳ್ಳಿ: ಜಿಪಂ ಸಿಇಓ ರಾಹುಲ್ ಶಿಂಧೆ

ಬೆಳಗಾವಿ: ಜಿಲ್ಲಾ ಪಂಚಾಯತ ಕಚೇರಿಯ ಕಡತಗಳನ್ನು 24 ಗಂಟೆಗಳಲ್ಲಿ ವಿಲೇವಾರಿ ಮಾಡಬೇಕೆಂದು ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ ಶಿಂಧೆ ಸೂಚಿಸಿದರು.

ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಪಂಚಾಯತ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಏರ್ಪಡಿಸಿದ್ದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಜನರಿಗೆ ಉತ್ತಮ ಆಡಳಿತ ನೀಡುವಲ್ಲಿ ಜಿಲ್ಲಾ ಪಂಚಾಯತಿಯ ಅಧಿಕಾರಿಗಳು, ಸಿಬ್ಬಂದಿ ಶ್ರಮ ವಹಿಸಬೇಕು. ಸರ್ಕಾರಿ ಮಟ್ಟದ ಪತ್ರಗಳು ಹಾಗೂ ಸ್ಥಳಿಯ ಪತ್ರಗಳಿಗೆ ಆದ್ಯತೆ ನೀಡಿ 24 ಗಂಟೆಗಳಲ್ಲಿ ಕಡತಗಳನ್ನು ವಿಲೇವಾರಿ ಮಾಡುವಂತೆ ನಿರ್ದೇಶನ ನೀಡಿದರು. ಪ್ರತಿ ಮಾಸಿಕದ ಮೊದಲನೇ ದಿನದಂದು ಕಚೇರಿ ಸಿಬ್ಬಂದಿಗಳ ಸಭೆಯನ್ನು ನಡೆಸಲಾಗುವುದು, ಕಚೇರಿ ಅಧಿಕಾರಿ ಹಾಗೂ ಎಲ್ಲ ಸಿಬ್ಬಂದಿಗಳು ಕಡ್ಡಾಯವಾಗಿ ರಾಷ್ಟ್ರೀಯ ಕಾರ್ಯಕ್ರಮಗಳಿಗೆ ಹಾಜರಿದ್ದು, ಹಬ್ಬದಂತೆ ಆಚರಣೆ ಮಾಡಲು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿಗಳಾದ ಬಸವರಾಜ ಹೆಗನಾಯಕ, ಬಸವರಾಜ ಅಡವಿಮಠ, ಯೋಜನಾ ನಿರ್ದೇಶಕ ರವಿ ಬಂಗಾರೆಪ್ಪನವರ, ಮುಖ್ಯ ಲೆಕ್ಕಾಧಿಕಾರಿ ಪರಶುರಾಮ ದುಡಗುಂಟಿ, ಮುಖ್ಯ ಯೋಜನಾಧಿಕಾರಿ ಗಂಗಾಧರ ದಿವಟರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಶ್ರೀ ಮಡಿವಾಳ ಮಾಚಿದೇವರ ಜಯಂತಿ-2024

ಪ್ರತಿಯೊಬ್ಬರು ಮಡಿವಾಳ ಮಾಚಿದೇವರ ತತ್ವಗಳನ್ನು ಅರಿತುಕೊಂಡು ಬದುಕಬೇಕು: ವಿಜಯಕುಮಾರ್ ಹೊನಕೇರಿ

ಬೆಳಗಾವಿ: ಶ್ರೀ ಮಡಿವಾಳ ಮಾಚಿದೇವರ ಆದರ್ಶ, ತತ್ವ, ಆಚಾರ-ವಿಚಾರಗಳನ್ನು ಪ್ರತಿಯೊಬ್ಬರು ಅರಿತುಕೊಂಡು ಯುವ ಪಿಳಿಗೆಗೆ ತತ್ವವನ್ನು ತಿಳಿಸಿಕೊಡಬೇಕು. ಎಲ್ಲ ಸಮುದಾಯದ ಜನರು ಶ್ರೀ ಮಡಿವಾಳ ಮಾಚಿದೇವರಂತೆ ದ್ವೇಷ, ಅಸೂಯೆ, ಜಾತಿ, ಮತ ಬಿಟ್ಟು ಎಲ್ಲರೂ ಆದರ್ಶಪ್ರಾಯವಾಗಿ ಬದುಕಬೇಕು ಎಂದು ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಗುರುವಾರ (ಫೆ.1) ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಹಮ್ಮಿಕೊಂಡಿದ ಶ್ರೀ ಮಡಿವಾಳ ಮಾಚಿದೇವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ವೇಳೆ ಯರಗಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕನ್ನಡ ಪ್ರಾಧ್ಯಾಪಕ ಡಾ. ರಾಜಶೇಖರ ಬಿರಾದಾರ ಮಾತನಾಡಿ, ಮಾಚಿದೇವರು ಗುರು ಬಸವೇಶ್ವರರು ಸಮಕಾಲೀನ ಶರಣರಾಗಿದ್ದರು. 12 ನೇ ಶತಮಾನದಲ್ಲಿ ಶೋಷಣೆ, ಜಾತೀಯತೆ, ಮೇಲು-ಕೀಳು ತಾರತಮ್ಯ, ಅಸ್ಪೃಶ್ಯತೆ, ಮೂಢನಂಬಿಕೆಗಳಂತಹ ಅನೇಕ ಸಾಮಾಜಿಕ ಅಸಮಾನತೆಯಿಂದ ಬಳಲಿದ ಬಡವರು, ದೀನ ದಲಿತರು, ನಿರಾಶೆ-ಹತಾಶೆಗೊಂಡವರ ಬದುಕಿಗೆ ಸಮಪಾಲು ಸಮಬಾಳು ಒದಗಿಸಲು ಶ್ರೀ ಮಡಿವಾಳ ಮಾಚಿದೇವರು ನಿರಂತರ ಶ್ರಮಿಸಿದ್ದಾರೆ ಎಂದರು.

ಪ್ರಾಣಿ ಹಿಂಸೆ ವಿರೋಧಿಸಿದ ಅವರು ಪ್ರಾಣಿ, ಪಕ್ಷಿ, ಸಮಾಜದ ಸಂಕುಲವನ್ನು ಸಮಾನ ದೃಷ್ಟಿಯಲ್ಲಿ ಕಾಣುವುದು ಧರ್ಮ. ಅನ್ಯಾಯದೊಡನೆ ರಾಜಿ ಮಾಡಿಕೊಳ್ಳುತ್ತಿರಲ್ಲ. ಇಂತಹ ಶರಣರು ಮಹಾಪುರುಷರು ಹಾಕಿಕೊಟ್ಟ ಮಾರ್ಗದರ್ಶದಲ್ಲಿ ಜೀವನ ಸಾಗಿಸಬೇಕು ಎಂದು ಡಾ. ರಾಜಶೇಖರ ಬಿರಾದಾರ ಅವರು ಹೇಳಿದರು.

ಜಿಲ್ಲಾ ಮಡಿವಾಳ ಸಮಾಜದ ಅಧ್ಯಕ್ಷ ಶಿವಾನಂದ ಮಡಿವಾಳರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಸೇರಿದಂತೆ ಸಮಾಜದ ಮುಖಂಡರು, ಮತ್ತಿತರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕಾರಂಜಿಮಠದಲ್ಲಿ ಶಿವಾನುಭವ ಕಾರ್ಯಕ್ರಮ

ಬೆಳಗಾವಿ ಶಿವಬಸವನಗರದ ಶ್ರೀ ಕಾರಂಜಿಮಠದ ಶಿವಾನುಭವ ಮಂಟಪದಲ್ಲಿ ದಿನಾಂಕ 5-2-2024ರಂದು ಸೋಮವಾರ ಸಾಯಂಕಾಲ 6 ಗಂಟೆಗೆ 271ನೆಯ ಮಾಸಿಕ ಶಿವಾನುಭವ ಕಾರ್ಯಕ್ರಮ ಜರುಗುವುದು. ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಕಾರಂಜಿಮಠದ ಪೂಜ್ಯ ಶ್ರೀ ಮ.ನಿ.ಪ್ರ. ಗುರುಸಿದ್ಧ ಮಹಾಸ್ವಾಮಿಗಳು ವಹಿಸುವರು.

ಹಿರಿಯ ಸಾಹಿತಿಗಳಾದ ಡಾ. ಪಿ.ಜಿ.ಕೆಂಪಣ್ಣವರ ಅವರು ಅಧ್ಯಕ್ಷತೆ ವಹಿಸುವರು. ಬೆಳಗಾವಿ ರಾಜಾಲಖಮಗೌಡ ಕಾನೂನು ಕಾಲೇಜಿನ ವಿದ್ಯಾರ್ಥಿನಿ ಕು. ಸಹನಾ ಮಹಾಂತೇಶ ವಾಲಿ ಅವರು "ಶರಣರ ವಚನಗಳಲ್ಲಿ ಕಾನೂನು ಪರಿಕಲ್ಪನೆ" ಎಂಬ ವಿಷಯ ಕುರಿತು ವಿಶೇಷ ಉಪನ್ಯಾಸ ನೀಡುವರು. ಶ್ರೀ ಸೋಮನಾಥ ಮುಗಳಿ ಮತ್ತು ಕಾರಂಜಿಮಠದ ಮಾತೃಮಂಡಳಿ ತಾಯಂದಿರಿಂದ ವಚನ ಸಂಗೀತ ಮತ್ತು ಪ್ರಾರ್ಥನೆ ಜರುಗುವುದು ಎಂದು ಶ್ರೀಮಠದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಅಪರಿಚಿತ ಶವ ಪತ್ತೆ

ಬೆಳಗಾವಿ: ಕುಡಚಿ ರೈಲು ನಿಲ್ದಾಣದ ಹತ್ತಿರ ಜ.31 ರಂದು ವ್ಯಕ್ತಿ ಮೃತ ದೇಹ ಪತ್ತೆಯಾಗಿದೆ. ಯಾವುದೋ ಖಾಯಿಲೆಯಿಂದ ಸ್ವಾಭಾವಿಕವಾಗಿ ಮೃತಪಟ್ಟಿದ್ದಾನೆ ಎಂದು ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ.

ಮೃತನ ವಯಸ್ಸು 60-65 ಆಗಿರಬಹುದು ಎಂದು ಅಂದಾಜಿಸಲಾಗಿದ್ದು, ಎತ್ತರ 5-6 ಇರುತ್ತದೆ. ಸಾದಗಪ್ಪು ಮೈ ಬಣ್ಣ, ಮೈಯಿಂದ ಸಾಧಾರಣ, ಉದ್ದ ಮುಖ, ತಲೆಯಲ್ಲಿ ಕಪ್ಪು ಬಿಳಿ ಕೂದಲು ಹಾಗೂ ಮೀಸೆ ದಾಡಿಬಿಟ್ಟಿರುತ್ತಾರೆ. ಕೊರಳಲ್ಲಿ ನೀಲಿ ಬಣ್ಣದ ಸರ, ಬಲಗೈಲ್ಲಿ ರುದ್ರಾಕ್ಷಿ ಸರ, ಎರಡು ಕಾಲಲ್ಲಿ ಕಪ್ಪು ದಾರ, ಕೇಸರಿ ಬಣ್ಣದ ಡಿಸೈನ್ ಪುಲ್ ಶರ್ಟ್ ಮತ್ತು ಕೇಸರಿ ಬಣ್ಣದ ಲುಂಗಿ ಧರಿಸಿರುತ್ತಾರೆ.

ಸದರಿ ಅಪರಿಚಿತ ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ತಿಳಿದು ಬಂದಲ್ಲಿ ನಗರದ ರೈಲ್ವೆ ಪೊಲೀಸ್ ಠಾಣೆ ದೂರವಾಣಿ 0831-2405273, ರೈಲ್ವೆ ಪೊಲೀಸ್ ಠಾಣೆ ನಿಯಂತ್ರಣ ಕೊಠಡಿ ದೂರವಾಣಿ 080-22871291 ಅಥವಾ ಪಿಎಸ್ಐ ಮೊ:9480802127 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ರೈಲ್ವೆ ಪೊಲೀಸ್ ಠಾಣೆ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯುತ್ ವ್ಯತ್ಯಯ

ಬೆಳಗಾವಿ: ಸುವರ್ಣಸೌಧ ಉಪಕೇಂದ್ರದಲ್ಲಿ 4ನೇ ತ್ರೈಮಾಸಿಕ ಹಾಗೂ ಇತರೆ ಕಾರ್ಯ ನಿರ್ವಹಿಸುವ ನಿಮಿತ್ಯ ಫೆ.4 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಬೆಳಗಾವಿ ನಗರದ ಕೇಲವು ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲ್ಲಿದೆ.

ಆಲರವಾಡ ಲೈನ್ 2ರಲ್ಲಿ ಕೆ.ಎಚ್.ಬಿ ಕಾಲೋನಿ, ವೃದ್ಧಾಶ್ರಮ ಪ್ರದೇಶ, ಅಲ್ಲಾರವಾಡ, ಸುವರ್ಣಸೌಧ ಲೈನ್ 2, ಸುವರ್ಣಸೌಧ ಲೈನ್ 1, ಬಸವೇಶ್ವರ ಸರ್ಕಲ್ ಲೈನ್ 5ರಲ್ಲಿ ಬಸವೇಶ್ವರ ವೃತ್ತ, ಜೋತಿ ಗಲ್ಲಿ, ನಾರ್ವೇಕರ್ ಗಲ್ಲಿ, ಆಚಾರ್ಯ ಗಲ್ಲಿ ಗದೆ ಮಾರ್ಗ, ಶಹಪೂರ, ಗಣೇಶಪೂರ ಗಲ್ಲಿ, ಪವಾರ ಗಲ್ಲಿ, ಬಸವನ ಗಲ್ಲಿ, ಸರಾಫ್‌ಗಲ್ಲಿ, ಬಿಚ್ಚು ಗಲ್ಲಿ, ಗ್ವಿಟ್‌ಗಲ್ಲಿ 1.2.3.4.5 ಕ್ರಾಸ್, ಹರಿಕಾಕಾ ಕಂಪೌಂಡ್ ಲೈನ್ 6ರ ಮಾರುತಿ ನಗರ, ಹರಿಕಾಕಾ ಕಂಪೌಂಡ್, ಪರ್ಯಾಯ ಸುವರ್ಣಸೌಧ ಲೈನ್ 8, ಯಡಿಯುರಪ್ಪಾ ರಸ್ತೆ ಲೈನ್ 9 ರ ಸಾಂಯಿ ಕಾಲನಿ, ಯಡಿಯುರಪ್ಪಾ ಮಾರ್ಗ, ಹಲಗಾ ರಸ್ತೆ, ಹಳೆ ಬೆಳಗಾವಿ, ಕಾಸಭಾಗ, ಬಸವನ ಗಲ್ಲಿ, ಬಜಾತ ಗಲ್ಲಿ, ಮಾರುತಿ ಗಲ್ಲಿಯಲ್ಲಿ ವಿದ್ಯುತ್ ವ್ಯತ್ಯಯ ಆಗಲಿದೆ ಎಂದು ವಿದ್ಯುತ್ ಬೆಳಗಾವಿ ನಗರ ವಿಭಾಗದ ಕಾರ್ಯನಿರ್ವಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾಲ ವಾಪಸ್ಸು ಕೊಡದ ಸ್ನೇಹಿತ: ಮನನೊಂದು ಸಾವಿನ ಹಾದಿ ಹಿಡಿದ ದಂಪತಿ

ಮೈಸೂರು: ಸ್ನೇಹಿತನಿಗೆ ಬೇರೊಬ್ಬರಿಂದ 5 ಲಕ್ಷ ಸಾಲ ಕೊಡಿಸಿದ್ದ ವ್ಯಕ್ತಿ ವಾಪಸ್ಸು ಕೊಡಲಿಲ್ಲವೆಂದು ದಂಪತಿ ಆತ್ಮಹತ್ಯೆ ಮಾಡಿದ ಘಟನೆ ಮೈಸೂರಿನ ಯರಗನಹಳ್ಳಿ ನಡೆದಿದೆ. ವಿಶ್ವ (34), ಸುಶ್ಮ (28) ಆತ್ಮಹತ್ಯೆಗೆ ಶರಣಾದ ದಂಪತಿಗಳು.

ಸಾಯುವ ಮುನ್ನ ದಂಪತಿ ವೀಡಿಯೋ ಮಾಡಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಶಿವು ಎಂಬಾತನಿಗೆ ವಿಶ್ವ ಬೇರೊಬ್ಬರಿಂದ ಸಾಲ ಕೊಡಿಸಿದ್ದನು. ಸುಮಾರು 5 ಲಕ್ಷ ರೂಪಾಯಿ ಸಾಲ ಕೊಡಿಸಿದ್ದನು. ಆದರೆ ಕೊಟ್ಟ ಸಾಲವನ್ನ ಮರು ಶಿವು ಪಾವತಿ ಮಾಡಿರಲಿಲ್ಲ. ಸಾಲಕೊಟ್ಟವರು ಸಾಲಕೊಡುವಂತೆ ಕೇಳುತ್ತಿದ್ದ ಕಾರಣ ದಂಪತಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ವಿಶ್ವ ತರಕಾರಿ ವ್ಯಾಪಾರ ಮಾಡಿಕೊಂಡಿದ್ದನು. ಚೋರನಹಳ್ಳಿ ರಾಜಣ್ಣ ಎಂಬಾತನಿಗೆ ವಿಶ್ವ ತನ್ನ ಚಿನ್ನಾಭರಣ ಕೊಟ್ಟಿದ್ದನು. ಆದರೆ ಆ ಚಿನ್ನವನ್ನು ವಾಪಸ್ಸು ಕೊಡದೆ ರಾಜಣ್ಣ ಸತಾಯಿಸುತ್ತಿದ್ದನು. ಇದರಿಂದ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದಾಗಿ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಅಪ್ಲೋಡ್ ಮಾಡಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಆಲನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸರಕಾರದ ಯೋಜನೆಗಳನ್ನು ಸಾರ್ವಜನಿಕರಿಗೆ ಸಮರ್ಪಕವಾಗಿ ತಲುಪಿಸಲು ಆದ್ಯತೆ: ಜಿಲ್ಲಾಧಿಕಾರಿ ದಿವ್ಯ ಪ್ರಭು

ಧಾರವಾಡ: ಸರಕಾರದ ಗ್ಯಾರಂಟಿ ಯೋಜನೆಗಳು ಸೇರಿದಂತೆ ಎಲ್ಲ ಅಭಿವೃದ್ಧಿ ಕಾರ್ಯಕ್ರಮಗಳನ್ನು ಸಾರ್ವಜನಿಕರಿಗೆ ಸಮರ್ಪಕವಾಗಿ ತಲುಪಿಸಲು ಆದ್ಯತೆ ನೀಡಲಾಗುವುದೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಜಿ.ಆರ್. ಜೆ. ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡುತ್ತಾ ರಾಜ್ಯ ಸರಕಾರದ ವಿವಿಧ ಯೋಜನೆಗಳನ್ನು ಸರಿಯಾಗಿ ಅರ್ಹ ಫಲಾನುಭವಿಗಳಿಗೆ ನಿಗದಿತ ಸಮಯದೊಳಗೆ ತಲುಪಿಸಲು ಆದ್ಯತೆ ನೀಡಲಾಗುವುದೆಂದರು. ಕೆಳಹಂತದ ಅಧಿಕಾರಿಗಳ ಕಚೇರಿಗೆ ಬರುವ ಪ್ರತಿ ಅರ್ಜಿಯನ್ನು ಗಣಕೀಕರಣಗೊಳಿಸುವ ನಿಟ್ಟಿನಲ್ಲಿ ಹಾಗೂ ವಿವಿಧ ಕಚೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿ ತಪ್ಪಿಸಲು ಕಟ್ಟುನಿಟ್ಟಿನ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದರು. ಸಕಾಲ, ನೆಮ್ಮದಿ, ಜನತಾದರ್ಶನ ಸಿಎಂ ಪೋರ್ಟಲ್‌ಗಳಲ್ಲಿ ಬರುವ ಅರ್ಜಿಗಳನ್ನು ಸಹ ಸಕಾಲದಲ್ಲಿ ವಿಲೆವಾರಿ ಮಾಡಲಾಗುತ್ತಿದೆ ಎಂದರು.

ಧಾರವಾಡ ಜಿಲ್ಲೆ ಅನೇಕ ಕ್ಷೇತ್ರಗಳಲ್ಲಿ ಹೆಸರುವಾಸಿಯಾಗಿದೆ. ಶಿಕ್ಷಣ ಕಾಶಿಯೆಂದೇ ಕರೆಯಲಾಗುತ್ತದೆ ಆದರೆ ಶೈಕ್ಷಣಿಕವಾಗಿ 28ನೇ ಸ್ಥಾನದಲ್ಲಿದ್ದು ಶಿಕ್ಷಣ ರ್ಯಾಂಕ್ ಹೆಚ್ಚಿಸುವ ನಿಟ್ಟಿನಲ್ಲಿ ಇಂದು ಎಲ್ಲ ಶಿಕ್ಷಣ ಅಧಿಕಾರಿಗಳೊಂದಿಗೆ ಸಭೆ ಕೈಗೊಳ್ಳಲಾಗಿದ್ದು, ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡಲಾಗುವುದೆಂದರು. ಈ ಒಂದು ತಿಂಗಳಲ್ಲಿ ವಿಷಯವಾರು ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸುವಲ್ಲಿ ವಿವಿಧ ತರಬೇತಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದೆಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಪರಿಶಿಷ್ಟ ಜಾತಿ ಹಾಗೂ ಪಂಗಡದ ಅಭಿವೃದ್ಧಿ, ಆರೋಗ್ಯ ಇಲಾಖೆಯ ಕಾರ್ಯಕ್ರಮಗಳತ್ತ ಹೆಚ್ಚಿನ ಒತ್ತು ನೀಡುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು.

ಸದ್ಯ ಜಿಲ್ಲೆಯ ಎಲ್ಲ 8 ತಾಲೂಕುಗಳನ್ನು ಬರಪೀಡಿತಯೆಂದು ಘೋಷಿಸಲಾಗಿದ್ದು ಜನ-ಜಾನುವಾರುಗಳಿಗೆ ನೀರಿನ ಸಮಸ್ಯೆ ಆಗದಂತೆ ಈಗಾಗಲೇ ಕ್ರೀಯಾಯೋಜನೆ ಹಮ್ಮಿಕೊಳ್ಳಲಾಗಿದೆ. ಇತ್ತಿಚೆಗೆ ಜಿಲ್ಲಾ ಉಸ್ತುವಾರಿ ಸಚಿವರ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಈ ಬಗ್ಗೆ ಸುದೀರ್ಘ ಚರ್ಚಿಸಲಾಗಿದೆ ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಕ್ರಮ ವಹಿಸಲಾಗಿದೆ. ಅಗತ್ಯವಿದಲ್ಲಿ ಮೇವು ಬ್ಯಾಂಕ್ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದೆಂದರು.

ಜಿಲ್ಲೆಯ ಮಲಪ್ರಭಾ ಕಾಲುವೆಗಳಿಂದ ಜನೇವರಿ 22 ರಿಂದ ನೀರು ಹರಿಸಲಾಗಿದೆ 50 ಕೆರೆಗಳು ಭರ್ತಿಯಾಗಿವೆ. 128 ಕುಡಿಯುವ ನೀರು ಸಮಸ್ಯಾತ್ಮಕ ಹಳ್ಳಿಗಳಲ್ಲಿ ಕ್ರೀಯಾಯೋಜನೆ ಮಾಡಲಾಗಿದೆ. ಖಾಸಗಿ ಕೊಳವೆ ಬಾವಿಗಳಿಂದ ನೀರು ಪೂರೈಕೆ ಹಾಗೂ ಟ್ಯಾಂಕರ್ ಮೂಲಕ ಸರಬರಾಜು ಮಾಡಲು ತಹಶೀಲ್ದಾರರಿಗೆ ಸೂಚಿಸಲಾಗಿದೆ. ಬರ ಪರಿಹಾರಕ್ಕೆ ಜಿಲ್ಲೆಗೆ 15 ಕೋಟಿ ರೂ. ಅನುದಾನವಿದ್ದು ಪ್ರತಿ ತಹಶಿಲ್ದಾರರಿಗೆ ಈಗಾಗಲೇ 50 ಲಕ್ಷ ಬಿಡುಗಡೆ ಮಾಡಲಾಗಿದೆ.

ಶಾಸಕರ ಅಧ್ಯಕ್ಷತೆಯಲ್ಲಿ ತಾಲೂಕಾ ಟಾಸ್ಕಫೋರ್ಸ್‌ನಲ್ಲಿ ಚರ್ಚಿಸಿ, ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತದೆ. ಅನುದಾನದ ಯಾವುದೇ ಕೊರತೆ ಇರುವುದಿಲ್ಲವೆಂದರು.

ಆಧುನಿಕತೆಯ ಯಾಂತ್ರಿಕ ಕಾಲದಲ್ಲಿ ನಾವೆಲ್ಲರೂ ಜಿಲ್ಲೆಯ ಹಸರೀಕರಣಕ್ಕೆ ಕೆರೆ ಸಂರಕ್ಷಣೆಗೆ ಸುಸ್ಥಿರ ಅಭಿವೃದ್ಧಿಗೆ ಆದ್ಯತೆ ನೀಡಬೇಕಾಗಿದೆ. ಪ್ರತಿಯೊಬ್ಬ ನಾಗರಿಕರು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಬೇಕಾಗಿದೆ. ಈ ನಿಟ್ಟಿನಲ್ಲಿ ಸರಕಾರೇತರ ಸಂಘ ಸಂಸ್ಥೆಗಳಿಗೂ ಎಲ್ಲ ರೀತಿಯ ಸಹಕಾರ ನೀಡುವುದಾಗಿ ಹೇಳಿದರು. ಪರಿಸರ ಸಂರಕ್ಷಣೆ ಹಾಗೂ ಕೆರೆಗಳ ಪುನಶ್ಚೇತನಕ್ಕೆ ಒತ್ತು ನೀಡುವುದಾಗಿ ಜಿಲ್ಲಾಧಿಕಾರಿ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಉಪಸ್ಥಿತರಿದ್ದರು.

ಜಯದೇವ ಆಸ್ಪತ್ರೆ ನಿರ್ದೇಶಕರ ಹುದ್ದೆಗೆ 21 ವೈದ್ಯರಿಂದ ಅರ್ಜಿ

ಬೆಂಗಳೂರು: ಜಯದೇವ ಆಸ್ಪತ್ರೆಯ ನಿರ್ದೇಶಕರ ಸ್ಥಾನದಿಂದ ಡಾ. ಸಿ.ಎನ್. ಮಂಜುನಾಥ್ ಅವರು ನಿವೃತ್ತಿಯಾದ ಹಿನ್ನೆಲೆ, ಇದೀಗ ನಿರ್ದೇಶಕರ ಹುದ್ದೆಗಾಗಿ ವೈದ್ಯಕೀಯ ಶಿಕ್ಷಣ ಇಲಾಖೆಗೆ 21 ವೈದ್ಯರು ಅರ್ಜಿ ಸಲ್ಲಿಸಿದ್ದಾರೆ ಎಂದು ಇಲಾಖೆಯ ಉನ್ನತ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ವೈದ್ಯಕೀಯ ಕಾಲೇಜ್ಗಳಲ್ಲಿ ಪ್ರೊಫೆಸರ್ ಆಗಿ ಕಾರ್ಯ ನಿರ್ವಹಿಸಿದ, ಬೆಂಗಳೂರು ಮತ್ತು ಮೈಸೂರು ಭಾಗದವರಿಂದ ಅರ್ಜಿ ಸಲ್ಲಿಕೆಯಾಗಿದೆ. ಈ 21 ಅರ್ಜಿಯಲ್ಲಿ 11 ಅಭ್ಯರ್ಥಿಗಳು ಈ ಹುದ್ದೆಗೆ ಅರ್ಹತೆ ಹೊಂದಿದ್ದಾರೆ. ಇನ್ನುಳಿದ 10 ಅರ್ಜಿಗಳಿಗೆ ಹುದ್ದೆಗೆ ಬೇಕಾದ ಅರ್ಹತೆ ಇಲ್ಲ ಎಂದು ತಿಳಿದು ಬಂದಿದೆ. ಸರ್ಕಾರ ಮುಂದಿನವಾರ ಜಯದೇವ ಆಸ್ಪತ್ರೆಯ ನಿರ್ದೇಶಕರನ್ನ ಆಯ್ಕೆ ಮಾಡುವ ಸಾಧ್ಯತೆ ಇದೆ.

ಈಗ ಜಯದೇವ ಆಸ್ಪತ್ರೆಯ ಪ್ರಭಾರ ನಿರ್ದೇಶಕರಾಗಿ ಡಾ. ರವೀಂದ್ರ ಅವರನ್ನು ನೇಮಿಸಲಾಗಿದೆ.

ಡಾ. ರವೀಂದ್ರ ಅವರು ನಿರ್ದೇಶಕರ ಹುದ್ದೆಗೆ ಅರ್ಜಿ ಸಲ್ಲಿಸಿಲ್ಲ. ಜಯದೇವ ಆಸ್ಪತ್ರೆ ನಿರ್ದೇಶಕ ಹುದ್ದೆ ಯಾರಿಗೆ ಒಲಿಯಲಿದೆ ಎಂಬುದೇ ಇದೀಗ ಕುತೂಹಲ ಮೂಡಿಸಿದೆ.

ಕಾಟಾಚಾರಕ್ಕೆ ನಡೆದ ಹುಕ್ಕೇರಿ ತಾಪಂ 'ಜಮಾಬಂದಿ'

ಹುಕ್ಕೇರಿ: ಪ್ರಜಾಪ್ರಭುತ್ವದ ಎರಡನೇ ಸ್ಥರದ ಸರ್ಕಾರ ಎನ್ನುವ ಹೆಗ್ಗಳಿಕೆಗೆ ಪಾತ್ರವಾಗಿರುವ ಹುಕ್ಕೇರಿ ತಾಲೂಕು ಪಂಚಾಯಿತಿಯು ಬುಧವಾರ ಏರ್ಪಡಿಸಿದ್ದ ಜಮಾಬಂದಿ ಕಾರ್ಯಕ್ರಮವು ಮಾ